ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

KB 12 YEARS 2013

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 255
7-4-2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 255

## ವಿಧಾನಸೌಧಕ್ಕೆ ಶಾಶ್ವತ ದೀಪಾಲಂಕಾರ ಉದ್ಘಾಟಿಸಿದ ಸಿಎಂ



**ಬೆಂಗಳೂರು:** ಆಡಳಿತ ಶಕ್ತಿಕೇಂದ್ರ ವಿಧಾನಸೌಧಕ್ಕೆ ಶಾಶ್ವತ ವಿದ್ಯುತ್ ದೀಪಾಲಂಕಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾನುವಾರ ಲೋಕಾರ್ಪಣೆಗೊಳಿಸಿದರು.

ಈ ಮುಂಚೆ ರಾಷ್ಟ್ರೀಯ ಹಬ್ಬ ಹಾಗೂ ವಿಶೇಷ ಸಂದರ್ಭಗಳಲ್ಲಿ ಮಾತ್ರ ವಿಧಾನಸೌಧಕ್ಕೆ ದೀಪಾಲಂಕಾರದ ವ್ಯವಸ್ಥೆ ಕಲ್ಪಿಸಲಾಗುತ್ತಿತ್ತು. ಇಂದಿನಿಂದ ಶಾಶ್ವತ ದೀಪಾಲಂಕಾರದ ವ್ಯವಸ್ಥೆ ಮಾಡಲಾಗಿದ್ದು, ಪ್ರತಿ ಶನಿವಾರ ಮತ್ತು ಭಾನುವಾರ ವರ್ಣರಂಜಿತ ವಿದ್ಯುತ್ ದೀಪಗಳಿಂದ ಶಕ್ತಿ ಕೇಂದ್ರ ಕಂಗೊಳಿಸಲಿದೆ.

## ಮುಖ್ಯಮಂತ್ರಿಗಳು ತಕ್ಷಣ ಜಾತಿ ಗಣತಿ ವರದಿ ಬಿಡುಗಡೆ ಮಾಡಬೇಕು

**ದಾವಣಗೆರೆ:** ರಾಜ್ಯದಲ್ಲಿ ಕುರುಬ ಸಮಾಜ ದೊಡ್ಡದಿದೆ. ಆದರೆ, ನಿಖರವಾಗಿ ಇಂತಿಷ್ಟೇ ಜನಸಂಖ್ಯೆ ಇದೆ ಎಂದು ತಿಳಿಯಲು ಜಾತಿ ಗಣತಿ ವರದಿ ಅತ್ಯಗತ್ಯ. ಹಾಗಾಗಿ ಸಿಎಂ ಸಿದ್ದರಾಮಯ್ಯ ಅವರು ಈ ಕೂಡಲೇ ಜಾತಿ ಗಣತಿ ವರದಿ ಬಿಡುಗಡೆ ಮಾಡಬೇಕು ಎಂದು ಹೊಸದುರ್ಗ ಕನಕ ಗುರುಪೀಠ ಶಾಖಾಮಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಆಗ್ರಹಿಸಿದರು.

ಭಾನುವಾರ ನಗರದ ರೋಟರಿ ಬಾಲಭವನದಲ್ಲಿ ದಾವಣಗೆರೆ ಜಿಲ್ಲಾ ಹಾಲುಮತ ಮಹಾಸಭಾ, ಜಿಲ್ಲಾ ಕುರುಬರ ಸಂಘ ಹಮ್ಮಿಕೊಂಡಿದ್ದ ಶ್ರೀಮದ್ ಜಗದ್ಗುರು ರೇವಣಸಿದ್ದೇಶ್ವರ ಜಯಂತಿ ಉದ್ಘಾಟಿಸಿ, ಡಾ. ಉದಯಶಂಕರ್ ಒಡೆಯರ್ ಅವರಿಗೆ "ಹಾಲುಮತ ಚೇತನ" ಗೌರವ ಪುರಸ್ಕಾರ ಪ್ರದಾನ ಮಾಡಿ ಅವರು ಮಾತನಾಡಿದರು.

ಜಾತಿಗಣತಿ ಯಾರ ವಿರುದ್ಧವೂ ಅಲ್ಲ. ಜಾತಿ ಗಣತಿ ಬಿಡುಗಡೆಯಿಂದ ಪ್ರತಿ ಸಮಾಜಕ್ಕೆ



ಆರ್ಥಿಕವಾಗಿ, ರಾಜಕೀಯವಾಗಿ, ಶೈಕ್ಷಣಿಕವಾಗಿ ಸೌಲಭ್ಯ ಕಲ್ಪಿಸಲು ಸಹಾಯಕವಾಗುತ್ತದೆ ಎಂದು ವಿವರಿಸಿದರು.

"ಹಿಂಡನ್ನಗಲಿದ ಗೋವು ಹುಲಿಕ್ಕಿದ ಮೇವು" ಎಂಬ ಕನಕದಾಸರ ವಾಣಿಯಂತೆ ಕುರುಬ ಸಮಾಜದಲ್ಲಿ ಒಗ್ಗಟ್ಟಿನ ಕೊರತೆ ಎದ್ದು ಕಾಣುತ್ತಿದೆ. ನಾವೆಲ್ಲಾ ಒಟ್ಟಾಗಿದ್ದರೆ ಮಾತ್ರ ವೈರಿಗಳಿಂದ ನಮಗೆ ಮುಕ್ತಿ. ಒಬ್ಬಂಟಿಗಳಾದರೆ ನಮಗೇ ಆಪತ್ತು ನಿಶ್ಚಿತವೆಂದು ಎಚ್ಚರಿಸಿದ ಅವರು, ಗ್ರಾಮೀಣ ಮಟ್ಟದ ಕುರುಬರಲ್ಲಿ ಒಗ್ಗಟ್ಟಿದೆ. ಆದರೆ, ಸಮಾಜದ ರಾಜಕಾರಣಿಗಳಲ್ಲಿ ಒಗ್ಗಟ್ಟಿನ ಕೊರತೆ ಎದುರಾಗಿದ್ದು, ಮುಂದೆ ನಮ್ಮ ಸಮಾಜಕ್ಕೆ ಗಟ್ಟಿದನಿಯಾಗಿ ನಿಲ್ಲುವವರು ಯಾರು? ಎಂಬ ಪ್ರಶ್ನೆ ಉದ್ಭವಿಸಿದೆ ಎಂದರು.

ಈ ಹಿಂದೆ ಇಂದಿರಾಗಾಂಧಿ, ನೆಹರೂಗೆ ಕರ್ನಾಟಕದಲ್ಲಿ ಅತೀ ಆಪ್ತರಾಗಿದ್ದವರು ಅಂದು ಸಂಸದರಾಗಿದ್ದ ಶ್ರೀ ಚನ್ನಯ್ಯ ಒಡೆಯರ್ ಅವರು. ರಾಜ್ಯದಲ್ಲಿ ಒಡೆಯರ್

### ಈಶ್ವರಾನಂದಪುರಿ ಸ್ವಾಮೀಜಿ ಆಗ್ರಹ

ಸೂಚಿಸಿದವರಿಗೆ ಟಿಕೇಟ್ ಸಿಗುತ್ತಿತ್ತು. ಆದರೆ, ಇಂದು ನಮ್ಮ ಸಮುದಾಯದವರಿಗೇ ಟಿಕೇಟ್ ಸಿಗುತ್ತಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

2028ರ ವೇಳೆಗೆ ಜಿಲ್ಲೆಯಲ್ಲಿ ನಾವು ಒಗ್ಗಟ್ಟಾದರೆ ನಮ್ಮ ಸಮಾಜದ ಮೂವರನ್ನು ಶಾಸಕರನ್ನಾಗಿಸಬಹುದು. ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಎಲ್ಲರೂ ಒಗ್ಗಟ್ಟಾಗಿ ಎಂದು ಕರೆ ನೀಡಿದರು.

ಶ್ರೀ ರೇವಣಸಿದ್ದೇಶ್ವರ ಜಯಂತಿಯನ್ನು ರೇಣುಕಾಚಾರ್ಯ ಜಯಂತಿಯಂದು ಆಚರಿಸಲಾಗುತ್ತಿದೆ. ಇದು ಸರಿಯಲ್ಲ. ಶ್ರೀ ರೇವಣಸಿದ್ದೇಶ್ವರ ಜಯಂತಿಯಂದೇ ಆಚರಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದರು.

ಇನ್‌ಸೈಟ್ ಸಂಸ್ಥೆ ಸಂಸ್ಥಾಪಕ ಜಿ.ಬಿ. ವಿನಯ್‌ಕುಮಾರ್ ಮಾತನಾಡಿ, ನಮ್ಮ ಜಿಲ್ಲೆಯಲ್ಲಿ ಇಂದಿಗೂ ಪಾಳೆಗಾರ ಸಂಸ್ಕೃತಿ ಇದೆ. ಎಲ್ಲವೂ ಅವರ ಅಣತಿಯಂತೆ ನಡೆಬೇಕೆಂಬ ದಬ್ಬಾಳಿಕೆ ಇದೆ. ಸಿಎಂ ಸಿದ್ದರಾಮಯ್ಯ ಅವರು ಮುಡಾ ಹಗರಣದಲ್ಲಿ ಸಿಲುಕಿದಾಗ ಅವರ ಪರ ಜಿಲ್ಲೆಯ ಕಾಂಗ್ರೆಸ್ ಮುಖಂಡರು ದನಿ ಎತ್ತಲಿಲ್ಲ. ಆದರೆ ನಾನು ನೈತಿಕ ಬೆಂಬಲ ನೀಡಿ ಅವರ ಪರ ನಿಂತೆ. ನಮ್ಮಲ್ಲಿ ಸ್ವಾಭಿಮಾನ ಇದ್ದಾಗ ಯಾರಿಗೂ ಅಂಜುವ ಅವಶ್ಯಕತೆ ಇಲ್ಲ ಎಂದು ಹೇಳಿದರು.

## ರಘುವಂಶ ತಿಲಕ ಶ್ರೀರಾಮನಿಗೆ ಭಕ್ತಿ ಸಮರ್ಪಣೆ



**ದಾವಣಗೆರೆ:** ಹಿಂದೂ ಕ್ಯಾಲೆಂಡರ್ ವರ್ಷದ ಮೊದಲ ತಿಂಗಳಾದ ಚೈತ್ರ ಮಾಸದಲ್ಲಿ ಬರುವ ನವಮಿಯಂದು ಶ್ರೀ ರಾಮನವಮಿಯನ್ನು ಎಲ್ಲೆಡೆ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಮಹಾವಿಷ್ಣುವಿನ ಏಳನೇ ಅವತಾರವಾದ ಶ್ರೀ ರಾಮನು ಜನಿಸಿದ ದಿನವನ್ನು ರಾಮ ನವಮಿಯಾಗಿ ಆಚರಿ ಸಲಾಗುತ್ತದೆ. ಭಾನುವಾರ ಈ ನಿಮಿತ್ತ ನಗರದ ಶ್ರೀರಾಮ ದೇವಸ್ಥಾನಗಳಲ್ಲಿ ವಿಶೇಷ ಅಲಂಕಾರ, ಪೂಜೆ ಪುನಸ್ಕಾರಗಳು ನೆರವೇರಿದವು.

ಮುಂಜಾನೆಯೇ ಶ್ರೀ ರಾಮ ದೇವಸ್ಥಾನಗಳಲ್ಲಿ ಸ್ವಾಮಿಗೆ ಪಂಚಾಮೃತ ಅಭಿಷೇಕ, ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಬಾಲರಾಮನನ್ನು ಸುಮಂಗಲಿಯರು ತೊಟ್ಟಿಲಿಗೆ ಹಾಕಿ ಶಾಸ್ತ್ರೋಕ್ತವಾಗಿ ಲಾಲಿ ಹಾಡಿದರು. ನಂತರ ಸೀತಾ ಸಮೇತ ಶ್ರೀರಾಮ, ಲಕ್ಷ್ಮಣ, ಆಂಜನೇಯ ಮೂರ್ತಿಗೆ ಮಹಾನೈವೇದ್ಯ ಮಾಡಿ, ಮಂಗಳಾರತಿ ಬೆಳಗಾಯಿತು. ನಂತರ ಆಗಮಿಸಿದ ಭಕ್ತರಿಗೆ ಪಾನಕ, ಕೋಸಂಬರಿ ಮಜ್ಜಿಗೆ ವಿತರಿಸಲಾಯಿತು.

ನಗರದ ಚಾಮರಾಜಪೇಟೆಯಲ್ಲಿರುವ ಶ್ರೀ ಕೋದಂಡರಾಮ ಸ್ವಾಮಿ ದೇವಾಲಯ, ಪಿ.ಜೆ. ಬಡಾವಣೆಯ ಖಮಿತ್ಕರ್ ಶ್ರೀ ರಾಮ ಮಂದಿರ, ಪಿ.ಬಿ. ರಸ್ತೆಯಲ್ಲಿರುವ ಆರ್.ಹೆಚ್. ಗೀತಾ ಮಂದಿರ, ಜಯದೇವ ವೃತ್ತದ ಶಂಕರ ಮಠದ ಆವರಣದಲ್ಲಿರುವ ಶ್ರೀರಾಮ ದೇವಸ್ಥಾನ ಹಾಗೂ ಶಾಮನೂರಿನ ಪುರಾತನ ರಾಮ ಮಂದಿರದಲ್ಲಿ ಶ್ರೀರಾಮ ನವಮಿ ಆರಾಧನೆ ನಡೆಯಿತು. ಭಕ್ತರು ಬೆಳಿಗ್ಗೆಯಿಂದಲೇ ಸರತಿ ಸಾಲಿನಲ್ಲಿ ನಿಂತು ಶ್ರೀರಾಮನ ದರುಶನ ಮಾಡಿ ಕೃತಾರ್ಥರಾದರು.

ಎಲ್ಲೆಡೆ ರಾಮ ತಾರಕ ಮಂತ್ರ ಪ್ರತಿಧ್ವನಿಸಿತು.

**ಪಾನಕ-ಮಜ್ಜಿಗೆ ವಿತರಣೆ :** ಶ್ರೀ ರಾಮ ನವಮಿ ಪ್ರಯುಕ್ತ ನಗರದ ಎಲ್ಲ ರಾಮಮಂದಿರಗಳಲ್ಲಿ ಪಾನಕ, ಕೋಸಂಬರಿ, ಮಜ್ಜಿಗೆ, ಸಜ್ಜಿಗೆಯನ್ನು ಪ್ರಸಾದ ರೂಪವಾಗಿ ವಿತರಿಸಲಾಯಿತು. ಇದಲ್ಲದೆ ವಿವಿಧ ಬಡಾವಣೆಗಳ ಪ್ರಮುಖ ರಸ್ತೆಗಳಲ್ಲಿ ಅನೇಕ ಸಂಘ ಸಂಸ್ಥೆಗಳಿಂದ ಶ್ರೀ ರಾಮನ ಭಾವಚಿತ್ರ ಇಟ್ಟು ಪೂಜೆ ಸಲ್ಲಿಸಿ, ಸ್ವ ಇಚ್ಛೆಯಿಂದ ಮಜ್ಜಿಗೆ, ಪಾನಕ, ಕೋಸಂಬರಿ ವಿತರಿಸುವ ಮೂಲಕ ಬಿರು ಬೇಸಿಗೆಯಲ್ಲಿ ದಾರಿಹೋಕರ ತಾಪ ತಣಿಸಿದರು. ಕೆಲವೆಡೆ ಅನ್ನಸಂತರ್ಪಣೆಯೂ ನಡೆಯಿತು.

## ಮಾತೃಭಾಷೆಯಲ್ಲೇ ವೈದ್ಯಕೀಯ ಶಿಕ್ಷಣ ಕಲಿಸಿ

### ಭಾಷಾ ಸಂಘರ್ಷದ ಮಧ್ಯೆ ತಮಿಳುನಾಡು ಸರ್ಕಾರಕ್ಕೆ ಮೋದಿ ಸಲಹೆ

**ರಾಮೇಶ್ವರಂ:** ತಮಿಳು ಭಾಷೆಯನ್ನು ಬಲವಾಗಿ ಪ್ರತಿಪಾದಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಭಾಷೆಯನ್ನು ಪ್ರಪಂಚದಾದ್ಯಂತ ಕೊಂಡೊಯ್ಯಲು ಎಲ್ಲಾ ಪ್ರಯತ್ನಗಳು ನಡೆಯುತ್ತಿವೆ. ಬಡವರಿಗೆ ಅನುಕೂಲವಾಗುವಂತೆ ತಮಿಳು ಮಾಧ್ಯಮದಲ್ಲೇ ವೈದ್ಯಕೀಯ ಶಿಕ್ಷಣ ನೀಡಬೇಕು ಎಂದು ಭಾನುವಾರ ತಮಿಳುನಾಡು ಸರ್ಕಾರಕ್ಕೆ ಸಲಹೆ ನೀಡಿದರು.

ಇಂದು ರಾಮನವಮಿಯ ಸಂದರ್ಭದಲ್ಲಿ ಒಟ್ಟು 8,300 ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಮಾಡಿ ಮಾತನಾಡಿದ ಮೋದಿ, ಶ್ರೀರಾಮನ ಉತ್ತಮ ಆಡಳಿತವು ರಾಷ್ಟ್ರ ನಿರ್ಮಾಣಕ್ಕೆ ಅಡಿಪಾಯ ಎಂದು ಹೇಳಿದರು.



ಹೊಸ ಪಂಬನ್ ಸೇತುವೆಯನ್ನು ಉದ್ಘಾಟಿಸಿದ ಪ್ರಧಾನಿ ಮೋದಿ, ಇದು ದೇಶದ ಮೊದಲ ವರ್ಟಿಕಲ್ ಲಿಫ್ಟ್ ರೈಲ್ವೆ ಸಮುದ್ರ ಸೇತುವೆ ಎಂದು ಹೇಳಿದರು. ತಮಿಳು ಭಾಷೆ, ಪರಂಪರೆಯನ್ನು ಪ್ರಪಂಚದ ಎಲ್ಲಾ ಮೂಲೆಗಳಿಗೆ ಕೊಂಡೊಯ್ಯುವ ಪ್ರಯತ್ನಗಳು ನಡೆಯುತ್ತಿವೆ ಎಂದು ಮೋದಿ ತಿಳಿಸಿದರು.

ಯಾರ ಹೆಸರನ್ನೂ ಪ್ರಸ್ತಾಪಿಸದೆ, ತಮಿಳುನಾಡು ನಾಯಕರಿಂದ ನನಗೆ ಹಲವು ಪತ್ರಗಳು ಬರುತ್ತವೆ. ಆದರೆ ಅವರು ಯಾರೂ ತಮಿಳಿನಲ್ಲಿ ಸಹಿ ಮಾಡುವುದಿಲ್ಲ" ಎಂದು ಮೋದಿ ಪರೋಕ್ಷವಾಗಿ ತಮಿಳುನಾಡು ಸರ್ಕಾರಕ್ಕೆ ಟಾಂಗ್ ನೀಡಿದರು.

"ಕನಿಷ್ಠ ಪಕ್ಷ ನಿಮ್ಮ ಸಹಿಯನ್ನಾದರೂ ತಮಿಳಿನಲ್ಲಿ ಮಾಡಿ" ಎಂದು ಮೋದಿ ಹೇಳಿದರು.

ಇದಲ್ಲದೆ, ಬಡ ಕುಟುಂಬಗಳ ವಿದ್ಯಾರ್ಥಿಗಳಿಗೆ ಪ್ರಯೋಜನವಾಗುವಂತೆ ರಾಜ್ಯದಲ್ಲಿ ತಮಿಳು ಮಾಧ್ಯಮದಲ್ಲಿ ವೈದ್ಯಕೀಯ ಶಿಕ್ಷಣವನ್ನು ಕಲಿಸಬೇಕೆಂದು ಅವರು ಒತ್ತಾಯಿಸಿದರು.




## ಕೊಂಡಜ್ಜಿ ಕೆರೆಯನ್ನು ಪ್ರವಾಸಿ ತಾಣವಾಗಿಸಲು ಕ್ರಮ

### ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ಜಿಲ್ಲೆಯಲ್ಲಿನ ಆರು ತಾಲ್ಲೂಕಿನಲ್ಲಿನ ಪ್ರಮುಖ ಸ್ಥಳಗಳನ್ನು ಗುರುತಿಸಿ, ಅವುಗಳನ್ನು ಪ್ರವಾಸಿ ತಾಣಗಳಾಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಅವರು ಶನಿವಾರ ಕೊಂಡಜ್ಜಿ ಕೆರೆಯಲ್ಲಿ ವಿಶ್ವಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆ ಹಾಗೂ ಬಾಲಕಿಯರಿಗೆ ಏರ್ಪಡಿಸಲಾದ ಜಲಸಾಹಸ ಕ್ರೀಡೆಯಲ್ಲಿ ವಿದ್ಯಾರ್ಥಿನಿಯರೊಂದಿಗೆ ನಡೆಸಿದ ಸಂವಾದದಲ್ಲಿ ಮಾತನಾಡಿದರು.



ಮಹಿಳಾ ದಿನಾಚರಣೆಯ ಪ್ರಯುಕ್ತ ಕೆರೆಯಲ್ಲಿ ಮಹಿಳೆಯರಿಗಾಗಿ ಏಪ್ರಿಲ್ 7 ರವರೆಗೆ ಉಚಿತವಾಗಿ ಜಲ ಸಾಹಸ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಜಿಲ್ಲೆಯು ಕ್ರೀಡೆಗೆ ಪ್ರಸಿದ್ಧಿ. ಹಾಗಾಗಿ ಮಹಿಳೆಯರನ್ನು ಕ್ರೀಡಾ ವಿಭಾಗದಲ್ಲಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸುವ ದೃಷ್ಟಿಯಿಂದ ಇದನ್ನು ಪ್ರವಾಸಿ ತಾಣವಾಗಿಸಿ, ವಿವಿಧ ರೀತಿಯ ಜಲ ಸಾಹಸ ಕ್ರೀಡೆಗಳ ತರಬೇತಿ ನೀಡಲಾಗುವುದು. ಆಸಕ್ತ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಅಷ್ಟೇ ಅಲ್ಲದೇ ಮಹಿಳಾ ದಿನಾಚರಣೆಯ ಪ್ರಯುಕ್ತ ಸ್ಪರ್ಧೆಗಳನ್ನು ಆಯೋಜಿಸಿ, ಸ್ಪರ್ಧೆಯಲ್ಲಿ ಜಯಗಳಿಸಿದ ಪ್ರಥಮ ಮತ್ತು ದ್ವಿತೀಯ ಸ್ಥಾನಗಳಿಗೆ ಪ್ರಶಸ್ತಿ ಪತ್ರ ನೀಡಲಾಗುವುದು. ಜಿಲ್ಲೆಯ ಚನ್ನಗಿರಿ, ಹರಿಹರ ಮುಂತಾದ ಕ್ಷೇತ್ರಗಳಲ್ಲಿನ ಐತಿಹಾಸಿಕ ಸ್ಥಳಗಳನ್ನು ಅಭಿವೃದ್ಧಿಪಡಿಸುವ ಮೂಲಕ ಪ್ರವಾಸಿ ತಾಣಗಳನ್ನಾಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದರು.

ಇದೇ ವೇಳೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಜಲ ಸಹಾಸ ಕ್ರೀಡೆಯಲ್ಲಿ ಭಾಗವಹಿಸದ ಸಂತೋಷದ ಕ್ಷಣ ಹಾಗೂ ಅನುಭವಗಳ ಕುರಿತು ಮಾಹಿತಿ ಪಡೆದರು. ನಾನು ಹಿಟ್ಟಿದ ಗ್ರಾಮ ಕಕ್ಕರಗೊಳ್ಳವಾಗಿದ್ದು ತಾಲ್ಲೂಕು ಮಟ್ಟದ ಸ್ಕೌಟ್ಸ್ ಅಂಡ್ ಗೈಡ್ ಕಾರ್ಯಕ್ರಮದಲ್ಲಿ ಕೊಂಡಜ್ಜಿಯಲ್ಲಿ ಭಾಗವಹಿಸಲಾಗಿತ್ತು. ಕೊಂಡಜ್ಜಿ ಕರೆಯಲ್ಲಿ ಜಲಸಾಹಸ ಕ್ರೀಡೆಗಳ ತರಬೇತಿಯನ್ನು ನೀಡಲು ಮುಂದಿನ ದಿನಗಳಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಜಿ. ಎಂ.ಗಂಗಾಧರಸ್ವಾಮಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ರೇಣುಕಾ, ತರಬೇತುದಾರ ಶಬ್ಬೀರ್ ಹಾಗೂ ವಿದ್ಯಾಥಿಗಳು ಭಾಗವಹಿಸಿದ್ದರು.

## ಡೀಸೆಲ್ ದರ ಏರಿಕೆ: ರಾಜ್ಯ ಸರ್ಕಾರದ ನಡೆ ಖಂಡಿಸಿ ಏಪ್ರಿಲ್ 14 ರಂದು ಲಾರಿ ಮಾಲೀಕರ ಮುಷ್ಕರ



**ಬೆಂಗಳೂರು:** ಅಗತ್ಯ ವಸ್ತುಗಳ ದರ ಏರಿಕೆ ಬೆನ್ನಲ್ಲೇ ರಾಜ್ಯ ಸರ್ಕಾರ ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಹೆಚ್ಚಿಸಿದ್ದು ಇದು ಲಾರಿ ಮಾಲೀಕರ ಆಕ್ರೋಶಕ್ಕೆ ಕಾರಣವಾಗಿದೆ. ಡೀಸೆಲ್ ದರ ಏರಿಕೆ ಖಂಡಿಸಿ ಏಪ್ರಿಲ್ 14ರ ಮಧ್ಯರಾತ್ರಿಯಿಂದ ಲಾರಿ ಮಾಲೀಕರ ಸಂಘ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲು ನಿರ್ಧರಿಸಿದೆ. ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಎರಡು ರೂಪಾಯಿ ಹೆಚ್ಚಳ ಮಾಡಿ ರಾಜ್ಯ ಸರ್ಕಾರ ಈಗಾಗಲೇ ಆದೇಶ ಹೊರಡಿಸಿದೆ. ಇದು ಲಾರಿ ಮಾಲೀಕರ ಆರ್ಕ್ರೋಶಕ್ಕೆ ಕಾರಣವಾಗಿದೆ. ಹೀಗಾಗಿ ಮುಷ್ಕರಕ್ಕೆ ಕರೆ ನೀಡಿದ್ದು 5 ಲಕ್ಷ ಲಾರಿಗಳು ಸಂಚಾರ ನಿಲ್ಲಿಸಲಿವೆ.

## ಇಬ್ಬರು ವಿಕಲಚೇತನ ಮಕ್ಕಳನ್ನು ಕೊಂದು ತಾಯಿ ಆತ್ಮಹತ್ಯೆ

**ತುಮಕೂರು:** ಮಹಿಳೆಯೋರ್ವಳು ತನ್ನ ಇಬ್ಬರು ವಿಕಲಚೇತನ ಮತ್ತಳನ್ನು ಕೊಂದು ನಂತರ ತಾನೂ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ಅದಲಗೆರೆ ಗ್ರಾಮದಲ್ಲಿ ನಡೆದಿದೆ.ತಾಯಿ ವಿಜಯಲಕ್ಷ್ಮೀ(45), ಮಗಳು ಚೂಡಾಮಣಿ(23), ಪುತ್ರ ನರಸಿಂಹರಾಜು(14) ಮನೆಯಲ್ಲಿ ನೇಣಿಗೆ ಶರಣಾಗಿದ್ದಾರೆ.ಪತಿ ಮಹದೇವಯ್ಯ ಮನೆಯಲ್ಲಿ ಇಲ್ಲದಿದ್ದಾಗ ಮೂವರು ಆತ್ಮಹತ್ಯೆಗೆ ಶರಣಾಗಿದ್ದಾರೆ.

## ಮಳಲಕೆರೆ ಗ್ರಾಮದಲ್ಲಿ ಖುದ್ದು ಚರಂಡಿ ಹೂಳೆತ್ತಿಸಿದ ಶಾಸಕ ಬಸವಂತಪ್ಪ



**ದಾವಣಗೆರೆ:** ಮಳಲಕೆರೆ ಗ್ರಾಮದ ಚರಂಡಿಗಳಲ್ಲಿ ತುಂಬಿದ್ದ ತ್ಯಾಜ್ಯ, ಹೂಳನ್ನು ಶಾಸಕ ಕೆ.ಎಸ್. ಬಸವಂತಪ್ಪ ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸ್ವತಃ ತಾವೇ ಮುಂದೆ ನಿಂತು ಚರಂಡಿಗಳಲ್ಲಿ ತುಂಬಿದ್ದ ಹೂಳು ತೆಗೆಸಿದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಮಳಲಕೆರೆ ಗ್ರಾಮದ ವಿವಿಧೆಡೆಯ ರಸ್ತೆ ಬದಿ ನಿರ್ಮಿಸಲಾದ ಚರಂಡಿ ಕಾಮಗಾರಿ ಅಪೂರ್ಣ, ಕೆಲಸ ಮುಗಿದ ಚರಂಡಿಯಲ್ಲಿ ತುಂಬಿದ ತ್ಯಾಜ್ಯ, ಹೂಳು, ಚರಂಡಿ ಮೂಲಕ ಹರಿಯಬೇಕಿದ್ದ ಗೃಹ ಬಳಕೆ ಕೊಳಚೆ ನೀರು ರಸ್ತೆಗೆ ಬಂದರೆ, ಇನ್ನು ಕೆಲವೊಮ್ಮೆ ಸುರಿದ ಮಳೆ ನೀರು ಮನೆಯೊಳಗೆ ಎಲ್ಲೆಡೆ ಕಾಣುತ್ತಿರುವ ನೈರ್ಮಲ್ಯದ ಸಮಸ್ಯೆ ಕಂಡು ಹೂಳೆತ್ತಲು ಚಾಲನೆ ನೀಡಲಾಗಿತ್ತು.

ಈ ಸಂದರ್ಭದಲ್ಲಿ ಗ್ರಾಮಕ್ಕೆ ಭೇಟಿ ನೀಡಿ-ದ್ದ ಶಾಸಕ ಕೆ.ಎಸ್. ಬಸವಂತಪ್ಪ, ತಾವೇ ಖುದ್ದು ಸ್ಥಳದಲ್ಲಿಯೇ ನಿಂತು ಚರಂಡಿಗಳಲ್ಲಿ ತುಂಬಿದ್ದ ತ್ಯಾಜ್ಯ, ಹೂಳು ತೆಗೆಸಿದರು.

ಗ್ರಾಮದಲ್ಲಿ ಅರ್ಧಮರ್ಧ ಕಾಮಗಾರಿಯಿಂದ ನಾನಾ ಸಮಸ್ಯೆ ಎದುರಿಸುವಂತಾಗಿತ್ತು. ಹಾಳಾದ ಚರಂಡಿಯಿಂದಾಗಿ ಮನೆ ಕೊಳಚೆ ಮತ್ತು ಮಳೆ ನೀರು ರಸ್ತೆಗೆ ಹರಿಯುತ್ತಿತ್ತು.

ಅಲ್ಲದೇ ರಸ್ತೆಯ ಮೇಲೆ ಬಿದ್ದ ಗುಂಡಿಗಳಲ್ಲಿ ಹೊಲಸು ನೀರು ನಿಂತು ಗಬ್ಬು ನಾರುತ್ತಿದ್ದು, ಪ್ರದೇಶದ ಜನರಲ್ಲಿ ಸಾಂಕ್ರಾಮಿಕ ರೋಗಗಳ ಭೀತಿ ಆವರಿಸಿತ್ತು. ಈಗ ಚರಂಡಿಗಳಲ್ಲಿ ತುಂಬಿದ್ದ ಹೂಳೆತ್ತಿದ್ದರಿಂದ ಗ್ರಾಮಸ್ಥರು ನಿಟ್ಟುಸಿರು ಬಿಟ್ಟಿದ್ದಾರೆ. ಗ್ರಾಮದ ಸ್ವಚ್ಛತೆಗೆ ಗ್ರಾಮಸ್ಥರು ಹೆಚ್ಚಿನ ಗಮನ ಹರಿಸಬೇಕು. ಚರಂಡಿಗಳು ತ್ಯಾಜ್ಯ, ಹೂಳು ತುಂಬಿದಂತೆ ಆಗಿಂದಾಗೆ ಸ್ವಚ್ಛಗೊಳಿಸಬೇಕು. ಯಾವುದೇ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ವಹಿಸಬೇಕು. ಗ್ರಾಮ ಸ್ವಚ್ಛವಾಗಿದ್ದರೆ ನಿಮ್ಮ ಆರೋಗ್ಯ ಸದೃಢವಾಗಿರುತ್ತದೆ ಎಂದು ಗ್ರಾಮಸ್ಥರಿಗೆ ಶಾಸಕರು ಕಿವಿಮಾತು ಹೇಳಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ. ಧೃತಿಗೆಡಬೇಡಿ – ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ. ಕಡಿಮೆ ಅಡೆತಡೆಗಳೊಂದಿಗೆ–ಇದು ಅದ್ಭುತ ಸಾಧನೆಗಳ ದಿನದಂತೆ ಕಾಣುತ್ತದೆ ತಾವು ಬಯಸಿದ್ದು ಸಿಗದಿದ್ದಲ್ಲಿ ಕಿರಿಕಿಯಾಗಿ ವರ್ತಿಸುವ ಸಹೋದ್ಯೋಗಿಗಳ ಎಚ್ಚರದಿಂದಿರಿ.

### ವೃಷಭ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ. ನಿಮ್ಮ ವರ್ತನೆ ಕೇವಲ ನಿಮ್ಮ ಕುಟುಂಬಕ್ಕೆ ಮಾತ್ರವೇ ಅಸಮಾಧಾನ ತರದೇ ಸಂಬಂಧಗಳಲ್ಲೂ ಶೂನ್ಯತೆಯನ್ನು ತರಬಹುದು. ನಿಮ್ಮ ಪ್ರೇಮಿಗೆ ಇಷ್ಟವಿಲ್ಲದ ಉಡುಪುಗಳು ಅವರಿಗೆ ಮುಜುಗರ ಉಂಟುಮಾಡಬಹುದಾದ್ದರಿಂದ ಅವುಗಳನ್ನು ಧರಿಸಬೇಡಿ. ನೀವು ಕಷ್ಟಕರವೆಂದು ತೋರುವ ಸಮಸ್ಯೆಗಳನ್ನು ಪರಿಹರಿಸಲು ನಿಮಗಿರುವ ಸಂಪರ್ಕಗಳನ್ನು ಬಳಸಬೇಕಾಗುತ್ತದೆ

### ಮಿಥುನ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ ಮತ್ತು ನಿಮ್ಮ ಕುಟುಂಬದ ಸದಸ್ಯರ ಮೇಲೆ ಪ್ರಭಾವ ಬೀರಲು ನಿಮಗೆ ಯಾವುದೇ ತೊಂದರೆ ಕಂಡುಬರುವುದಿಲ್ಲ.

### ಕರ್ಕ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ನಿಮಗೆ ಆಶ್ಚರ್ಯವಾಗುವ ಹಾಗೆ ನಿಮ್ಮ ಸಹೋದರ ನಿಮ್ಮನ್ನು ಪಾರು ಮಾಡುತ್ತಾರೆ. ನೀವು ಒಬ್ಬರೊಬ್ಬರನ್ನು ಸಂತೋಷವಾಗಿಡಲು ಒಟ್ಟೊಟ್ಟಿಗೆ ಕೆಲಸ ಮಾಡಬೇಕು.

### ಸಿಂಹ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ – ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ. ಇಂದು ಕೆಲಸದಲ್ಲಿ ನಿಮಗೆ ನಿಜಕ್ಕೂ ಒಳ್ಳೆಯದಾಗಬಹುದು, ಇಂದು ನಿಮ್ಮನ್ನು ದ್ವೇಷಿಸುವವರಿಗೆ 'ಹಲೋ' ಎಂದಲ್ಲಿ.

### ಕನ್ಯಾ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಅನಿರೀಕ್ಷಿತ ಬಿಲ್ಲಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ಪ್ರೀತಿ ಇಂದ್ರಿಯಗಳ ಮಿತಿಯನ್ನು ಮೀರಿದ್ದಾಗಿದೆ, ಆದರೆ ನಿಮ್ಮ ಇಂದ್ರಿಯಗಳು ಇಂದು ಪ್ರೀತಿಯ ಭಾವಪರವಶತೆಯನ್ನು ಅನುಭವಿಸುತ್ತವೆ. ನೀವು ಏನೂ ಮಾಡಿದರೂ ಪರಿಪೂರ್ಣವಾಗಿ ಮಾಡುತ್ತೀರಿ – ನಿಮ್ಮ ಸುತ್ತಲಿನವರಿಗೆ ನೀವೆಷ್ಟು ಪರಿಣಾಮಕಾರಿಯೆಂದು ತೋರಿಸುವ ಮೂಲಕ ನಿಮ್ಮ ಮೌಲ್ಯವನ್ನು ಸಾಬೀತು ಮಾಡಿ.

### ತುಲಾ ರಾಶಿ

ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ

### ವೃಶ್ಚಿಕ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ತನ್ನ ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ಧನು ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಗೆ ಪ್ರತಿಫಲ ದೊರಕುತ್ತದೆ. ಆದರೆ ಯಾವುದೇ ಆತುರದ ತೀರ್ಮಾನ ಒತ್ತಡ ಉಂಟುಮಾಡಬಹುದಾದ್ದರಿಂದ ಎಚ್ಚರಿಕೆಯಿಂದಿರಿ.

### ಮಕರ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು.

### ಕುಂಭ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ಮೀನ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು.

## ಚದುರಂಗ ಮಕ್ಕಳನ್ನು ಬುದ್ಧಿವಂತರನ್ನಾಗಿ ಮಾಡುತ್ತದೆ: ದಿನೇಶ್ ಕೆ ಶೆಟ್ಟಿ



**ದಾವಣಗೆರೆ** : ದಾವಣಗೆರೆ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ ತರಳಬಾಳು ಬಡಾವಣೆ ಮತ್ತು ನಿಜಲಿಂಗಪ್ಪ ಬಡಾವಣೆಯಲ್ಲಿ ಏರ್ಪಡಿಸಲಾಗಿರುವ ಚೆಸ್ ಬೇಸಿಗೆ ತರಬೇತಿ ಶಿಬಿರವನ್ನು ಇಂದು ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ಉದ್ಘಾಟಿಸಿ ಚದುರಂಗ ಮಕ್ಕಳನ್ನು ಬುದ್ಧಿವಂತರನ್ನಾಗಿ ಮಾಡುತ್ತದೆ ಇಂತಹ ಆಟಗಳಲ್ಲಿ ತರಬೇತಿ ಪಡೆದು ತಮ್ಮ ಜೀವನ ರೂಪಿಸಿಕೊಂಡು ಉತ್ತಮ ಪ್ರಜೆಗಳಾಗಬೇಕೆಂದು ತಿಳಿಸಿದರು ಹಾಗೂ ಪ್ರತಿ ಶನಿವಾರ ಮತ್ತು ಭಾನುವಾರ ದಾವಣಗೆರೆ ಜಿಲ್ಲೆಯ ಕ್ರೀಡಾಪಟುಗಳಿಗೆ ಅನುಕೂಲವಾಗುವಂತೆ ಅಭ್ಯಾಸ ಮಾಡಲು ಚೆಸ್ ಕ್ಲಬ್ ನನ್ನು ಉದ್ಘಾಟನೆ ಮಾಡಲಾಗಿದೆ ಕ್ಲಬ್ ನ ಸದಸ್ಯತ್ವ ಪಡೆದು ಸದುಪಯ ೋಗಪಡಿಸಿಕೊಳ್ಳಬೇಕೆಂದು ದಿನೇಶ್ ಕೆ ಶೆಟ್ಟಿಯವರು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿಗಳಾದ ಯುವರಾಜ್ ಮಂಜುಳಾ ಯುವರಾಜ್ ಚಾರ್ಟೆಡ್ ಅಕೌಂಟೆಂಟ್ ಆದ ಯಶವಂತ್ ತೇಜಸ್ ತರುಣ್ ಸೌಜನ್ಯ ಇನ್ನು ಮುಂತಾದವರು ಇದ್ದರು

ಈ ಬೇಸಿಗೆ ತರಬೇತಿ ಶಿಬಿರದಲ್ಲಿ 3 ರಿಂದ 15 ವರ್ಷದ ಒಳಗಿನಮಕ್ಕಳಿಗೆ ಏಪ್ರಿಲ್ 5ರಿಂದ ಮೇ 17ರವರೆಗೆ 45 ದಿನಗಳ ಕಾಲ ಮೂರು ಹಂತಗಳಲ್ಲಿ ಏಪ್ರಿಲ್ 5 ರಿಂದ ಏ 19 ರವರೆಗೆ ಮತ್ತು 20 ರಿಂದ ಮೇ 3 ಹಾಗೂ ಮೇ 4 ರಿಂದ 17 ರ ವರೆಗೆ ಸತತ 45 ದಿನಗಳ ಕಾಲ ಮೂರು ಹಂತಗಳಲ್ಲಿ ತರಬೇತಿ ನಡೆಸಲಾಗುತ್ತಿದೆ.

ಈ ಬಾರಿ ವಿಶೇಷವಾಗಿ 3 ರಿಂದ 7 ವರ್ಷದ ಒಳಗಿನ ಮಕ್ಕಳಿಗೆ ಪ್ರತಿದಿನ ಸಂಜೆ 5 ಗಂಟೆಯಿಂದ 6 ಗಂಟೆವರೆಗೆ ವಿಶೇಷ ಬ್ಯಾಚ್ ಮಾಡಿ ಚೆಸ್ ತರಬೇತಿ ನೀಡಲಾಗುವುದು ಎಂದು ಕಾರ್ಯದರ್ಶಿಗಳಾದ ಯುವರಾಜ್ ತಿಳಿಸಿದರು.

ತರಳಬಾಳು ಬಡಾವಣೆಯಲ್ಲಿ ಬೆಳಗ್ಗೆ 07–30 ರಿಂದ 08–30, ಸಂಜೆ 06 ರಿಂದ 07 ಮತ್ತು 07 ರಿಂದ 08

ನಿಜಲಿಂಗಪ್ಪ ಬಡಾವಣೆಯಲ್ಲಿ ಬೆಳಗ್ಗೆ 11 ರಿಂದ 01–00 ಗಂಟೆಯವರೆಗೆ ಬ್ಯಾಚ್ಗಳಾಗಿ ವಿಂಗಡಿಸಿ ತರಬೇತಿ ನೀಡಲಾಗುವುದು ಹೆಚ್ಚಿನ ಮಾಹಿತಿಗಾಗಿ 9945613469 7259310197 ಸಂಪರ್ಕಿಸಲು ತಿಳಿಸಿದರು.

## ಕೊಂಡಜ್ಜಿ ಕೆರೆಯನ್ನು ಪ್ರವಾಸಿ ತಾಣವಾಗಿಸಲು ಕ್ರಮ

### ಬಾಲಕಿಯರ ಜಲಸಾಹಸ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹಿಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ;** ಜಿಲ್ಲೆಯಲ್ಲಿನ ಆರು ತಾಲ್ಲೂಕಿನಲ್ಲಿನ ಪ್ರಮುಖ ಸ್ಥಳಗಳನ್ನು ಗುರುತಿಸಿ, ಅವುಗಳನ್ನು ಪ್ರವಾಸಿ ತಾಣಗಳಾಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಅವರು ಶನಿವಾರ ಕೊಂಡಜ್ಜಿ ಕೆರೆಯಲ್ಲಿ ವಿಶ್ವಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆ ಹಾಗೂ ಬಾಲಕಿಯರಿಗೆ ಏರ್ಪಡಿಸಲಾದ ಜಲಸಾಹಸ ಕ್ರೀಡೆಯಲ್ಲಿ ವಿದ್ಯಾರ್ಥಿನಿಯರೊಂದಿಗೆ ನಡೆಸಿದ ಸಂವಾದದಲ್ಲಿ ಮಾತನಾಡಿದರು.

ಮಹಿಳಾ ದಿನಾಚರಣೆಯ ಪ್ರಯುಕ್ತ ಕೆರೆಯಲ್ಲಿ ಮಹಿಳೆಯರಿಗಾಗಿ ಏಪ್ರಿಲ್ 7 ರವರೆಗೆ ಉಚಿತವಾಗಿ ಜಲ ಸಾಹಸ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಜಿಲ್ಲೆಯು ಕ್ರೀಡೆಗೆ ಪ್ರಸಿದ್ಧಿ. ಹಾಗಾಗಿ ಮಹಿಳೆಯರನ್ನು ಕ್ರೀಡಾ ವಿಭಾಗದಲ್ಲಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸುವ ದೃಷ್ಟಿಯಿಂದ ಇದನ್ನು ಪ್ರವಾಸಿ ತಾಣವಾಗಿಸಿ, ವಿವಿಧ ರೀತಿಯ ಜಲ ಸಾಹಸ ಕ್ರೀಡೆಗಳ ತರಬೇತಿ ನೀಡಲಾಗುವುದು. ಆಸಕ್ತ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಅಷ್ಟೇ ಅಲ್ಲದೇ ಮಹಿಳಾ ದಿನಾಚರಣೆಯ ಪ್ರಯುಕ್ತ ಸ್ಪರ್ಧೆಗಳನ್ನು ಆಯೋಜಿಸಿ, ಸ್ಪರ್ಧೆಯಲ್ಲಿ ಜಯಗಳಿಸಿದ ಪ್ರಥಮ ಮತ್ತು ದ್ವಿತೀಯ ಸ್ಥಾನಗಳಿಗೆ ಪ್ರಶಸ್ತಿ ಪತ್ರ ನೀಡಲಾಗುವುದು. ಜಿಲ್ಲೆಯ ಚನ್ನಗಿರಿ, ಹರಿಹರ ಮುಂತಾದ ಕ್ಷೇತ್ರಗಳಲ್ಲಿನ ಐತಿಹಾಸಿಕ ಸ್ಥಳಗಳನ್ನು ಅಭಿವೃದ್ಧಿಪಡಿಸುವ ಮೂಲಕ ಪ್ರವಾಸಿ ತಾಣಗಳನ್ನಾಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದರು.

ಇದೇ ವೇಳೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಜಲ ಸಹಾಸ ಕ್ರೀಡೆಯಲ್ಲಿ ಭಾಗವಹಿಸದ ಸಂತೋಷದ ಕ್ಷಣ ಹಾಗೂ ಅನುಭವಗಳ ಕುರಿತು ಮಾಹಿತಿ ಪಡೆದರು.

ನಾನು ಹುಟ್ಟಿದ ಗ್ರಾಮ ಕಕ್ಕರಗೊಳ್ಳವಾಗಿದ್ದು ತಾಲ್ಲೂಕು ಮಟ್ಟದ ಸ್ಕೌಟ್ಸ್ ಅಂಡ್ ಗೈಡ್ ಕಾರ್ಯಕ್ರಮದಲ್ಲಿ ಕೊಂಡಜ್ಜಿಯಲ್ಲಿ ಭಾಗವಹಿಸಲಾಗಿತ್ತು. ಕೊಂಡಜ್ಜಿ ಕರೆಯಲ್ಲಿ ಜಲಸಾಹಸ ಕ್ರೀಡೆಗಳ ತರಬೇತಿಯನ್ನು ನೀಡಲು ಮುಂದಿನ ದಿನಗಳಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ರೇಣುಕಾ, ತರಬೇತುದಾರ ಶಬ್ಬೀರ್ ಹಾಗೂ ವಿದ್ಯಾಥಿಗಳು ಭಾಗವಹಿಸಿದ್ದರು.

## ಡಾ. ಬಾಬು ಜಗಜೀವನ್ ರಾಮ್ ಸಾಧನೆ ಚಿಂತನೆಗಳು: ದಾರಿದೀಪ



**ಹಾಸನ;** ಹಸಿರು ಕ್ರಾಂತಿಯ ಹರಿಕಾರರು ಡಾ. ಬಾಬು ಜಗಜೀವನ್ ರಾಮ್ ಅವರ ಸಾಧನೆ ಚಿಂತನೆಗಳು ನಮಗೆಲ್ಲರಿಗೂ ದಾರಿದೀಪವಾಗಿದ್ದು, ಮುಂದಿನ ಯುವ ಪೀಳಿಗೆ ತಿಳುವಳಿಕೆ ಮೂಡಿಸಬೇಕು ಎಂದು ಸಂಸದರಾದ ಶ್ರೇಯಸ್ ಪಟೇಲ್ ಅವರು ಹೇಳಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರ ಸಭೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಇಂದು ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಡಾ.ಬಾಬು ಜಗಜೀವನ್ ರಾಮ್‌ರವರ 118 ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ರೈಲ್ವೆ ಇಲಾಖೆ ಸಚಿವರಾಗಿ ಅವರು ನೀಡಿರುವಂತಹ ಕೊಡುಗೆ ಅಪಾರವಾಗಿದೆ. ಇಂದಿಗೂ ರೈಲ್ವೆ ನಿಲ್ದಾಣಗಳಲ್ಲಿ ಅವರ ಹೆಸರು ಅಜರಾಮರವಾಗಿದೆ ಸಮಾಜದಲ್ಲಿರುವ ನಾವೆಲ್ಲರೂ ಅವರಿಗೆ ಗೌರವ ಸಲ್ಲಿಸುವಂತಹದ್ದು ನಮ್ಮ ಜವಾಬ್ದಾರಿ ಆಗಿದೆ ಎಂದರು.

ಅವರು ಆಡಳಿತ ಮಾಡಿದ ದೇಶದಲ್ಲಿ ನಾನು ಕೂಡ ಸಂಸದನಾಗಿದ್ದೇನೆ ಎಂದರೆ ಅದು ನನ್ನ ಸೌಭಾಗ್ಯವಾಗಿದೆ. ಆದಷ್ಟು ಬೇಗ ಜಿಲ್ಲೆಯಲ್ಲಿ ಬಾಬು ಜಗಜೀವನ್ ರಾಮ್ ರವರ ಸಮುದಾಯ ಭವನ ನಿರ್ಮಾಣದ ಕುರಿತು ಸಮಾಜ ಕಲ್ಯಾಣ ಇಲಾಖೆಯ ಸಚಿವರ ಗಮನಕ್ಕೆ ತಂದು ಶೀಘ್ರವೇ ಕಟ್ಟಡ ನಿರ್ಮಾಣಕ್ಕೆ ಅನುದಾನ ತರುವಂತಹ ಕೆಲಸವನ್ನು ಮಾಡುತ್ತೇನೆ ಎಂದು ತಿಳಿಸಿದರು.

ಆದಷ್ಟು ಬೇಗ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿಯನ್ನು ಆರಂಭಿಸಲಾಗುವುದು ಹಾಗೂ ಬಾಬು ಜಗಜೀವನ್ ರಾಮ್ ರವರ ಕಂಚಿನ ಪ್ರತಿಮೆಯನ್ನು ಸಹ ಅನಾವರಣಗೊಳಿಸಲಿದ್ದೇವೆ ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್ ಪೂರ್ಣಿಮಾ ಅವರು ಮಾತನಾಡಿ ಸಣ್ಣ ಹಳ್ಳಿಯಲ್ಲಿ ಹುಟ್ಟಿ, ರಾಷ್ಟ್ರದ ಅತ್ಯುನ್ನತ ಪದವಿಯನ್ನು ಅಲಂಕರಿಸಿದ ಮಹಾನ್ ವ್ಯಕ್ತಿ ಡಾ. ಬಾಬು ಜಗಜೀವನ್ ರಾಮ್ ಅವರಾಗಿದ್ದಾರೆ. ಇವರು ರಕ್ಷಣಾ ಇಲಾಖೆ, 1967 ರಲ್ಲಿ ಭಾರತದಲ್ಲಿ ಜನಸಂಖ್ಯೆ ಹೆಚ್ಚಾಗಿ ಆಹಾರ ಉತ್ಪಾದನೆಯ ಪ್ರಮಾಣ ಕಡಿಮೆಯಾಗಿದ್ದ ಸಂದರ್ಭದಲ್ಲಿ ಆಹಾರ ಉತ್ಪಾದನೆಯ ಪ್ರಮಾಣವನ್ನು ಹೆಚ್ಚಿಸಿ ಹಸಿರು ಕ್ರಾಂತಿಯನ್ನು ಮಾಡಿ ಬಡವರ ಹೊಟ್ಟೆಯನ್ನು ತುಂಬಿಸಿದಂತಹ ಮಹಾನ್ ಪುರುಷರು ಇವರಾಗಿದ್ದಾರೆ. ಸ್ವಾತಂತ್ರ್ಯ ಹೋರಾಟಗಾರರಲ್ಲಿ ಇವರು ಕೂಡ ಒಬ್ಬರಾಗಿದ್ದಾರೆ. 1977 ರಲ್ಲಿ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಕಾರ್ಯ ನಿರ್ವಹಿಸಿದ್ದಾರೆ ಇಂದು ಅವರು ಹಾಕಿಕೊಟ್ಟಿರುವ ಮಾರ್ಗದಲ್ಲಿ ನಾವೆಲ್ಲರೂ ನಡೆಯೋಣ ಎಂದು ಹೇಳಿದರು.

ಮೈಸೂರಿನ ವಿಚಾರವಾದಿಗಳು ಮತ್ತು ಹಿರಿಯ ಚರ್ಮ ರೋಗ ತಜ್ಞರಾದ ಡಾ॥ ಕುಮಾರ್ ಭೂತಯ್ಯ ಅವರು ಮಾತನಾಡಿ ರಾಷ್ಟ್ರ ಪ್ರಗತಿ ಪಥದಲ್ಲಿ ಸಾಗುವುದಕ್ಕೆ ಡಾ. ಬಾಬು ಜಗಜೀವನ್ ರಾಮ್ ಅವರು ಬಹುಪಾಲು ಕಾರಣರಾಗಿದ್ದಾರೆ. ಅವರು ಕಾರ್ಮಿಕ ಸಚಿವರಾಗಿ ಜಾರಿಗೆ ತಂದಂತಹ ಕಾರ್ಮಿಕ ನೀತಿಗಳು, ರೈಲ್ವೆ ನಿಯಮಗಳು, ರಕ್ಷಣಾ ಸಚಿವರಾಗಿದ್ದಾಗ ಜಾರಿಗೆ ತಂದಂತಹ ನಿಯಮಗಳು, ಕೃಷಿ ಕ್ರಾಂತಿ, ಹೀಗೆ ಎಲ್ಲಾ ಕ್ಷೇತ್ರಗಳಲ್ಲಿಯೂ ಇವರ ಸಾಧನೆಯು ಅಪಾರವಾಗಿದೆ ಎಂದರು.

ಜಾತಿ೦ು೨ತ್ಿ೦ು೨ನ್ು೨ ಹೋಗಲಾಡಿಸುವಲ್ಲಿಯೂ ಕೂಡ ಬಹಳಷ್ಟು ಶ್ರಮಿಸಿದ್ದಾರೆ. ಮೌನವಾಗಿ ಕೆಲಸ ಮಾಡಿ ಒಂದು ವ್ಯವಸ್ಥೆಯೊಳಗೆ ಹೇಗೆ ಬದಲಾವಣೆ ಮಾಡಬಹುದು ಎಂಬುದರ ಕುರಿತು ನಮಗೆ ಮಾದರಿಯಾಗಿದ್ದಾರೆ ಎಂಬುದನ್ನು ಉದಾಹರಿಸಿ ಬಾಬು ಜಗಜೀವನ್ ರಾಮ್ ರವರ ಕುರಿತಾಗಿ ಸವಿವರವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಬಿ.ಪಿ ಕೃಷ್ಣೇಗೌಡ, ಹಾಸನ ನಗರ ಸಭೆಯ ಅಧ್ಯಕ್ಷರಾದ ಚಂದ್ರೇಗೌಡ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ದೂದ್ ಫೀರ್ ಹಾಗೂ ಸಮುದಾಯದ ಮುಖಂಡರಾದ ಶಂಕರ್‌ರಾಜ್, ಸಂದೇಶ್,ವಿಜಯ ಕುಮಾರ್,ಸತೀಶ್ ಮತ್ತಿತರರು ಉಪಸ್ಥಿತರಿದ್ದರು.

## ಇಂದು ಮತ್ತು ನಾಳೆ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾ ಕೂಟ

**ಹಾಸನ** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಏ.07 ಮತ್ತು 08 ರಂದು ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಇಂದು ಬೆ.11 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿದೆ. ಅಂದು ಸಂಜೆ 06 ಗಂಟೆಗೆ ಅನುರಾಧ ಭಟ್ ಮತ್ತು ತಂಡದವರಿಂದ ಸಂಗೀತ ಸಂಜೆ ರಸಮಂಜರಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ. ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್.ರಾಜಣ್ಣ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ ಗೌರವ ಉಪಸ್ಥಿತಿ ವಹಿಸಲಿದ್ದಾರೆ, ಶಾಸಕರಾದ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದರಾದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ. ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ॥ ಸೂರಜ್ ರೇವಣ್ಣ ಹಾಗೂ ನಗರಸಭೆ ಅಧ್ಯಕ್ಷರಾದ ಚಂದ್ರೇಗೌಡ ಎಂ. ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿಗಳಾದ ಸತ್ಯಭಾಮ ಸಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ ಬಿ.ಆರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮರ್ ಸುಜೀತ ಎಂ.ಎಸ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಖಜಾಂಚಿ ವಿ.ವಿ. ಶಿವರುದ್ರಯ್ಯ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಗಿರೀಗೌಡ ಭಾಗವಹಿಸಲಿದ್ದಾರೆ.

## ಡಾ.ಬಾಬು ಜಗಜೀವನ ರಾಮ್ ಶೋಷಿತರ ಹಕ್ಕಿಗಾಗಿ ಹೋರಾಡಿದವರು: ಕೆ.ಜೆ.ಜಾರ್ಜ್



ಚಿಕ್ಕಮಗಳೂರು: ಮಾಜಿ ಉಪ ಪ್ರಧಾನಿ ಬಾಬು ಜನಜೀವನ ರಾಮ್ ಅವರು ಶೋಷಿತರ ದಮನಿತರ ಪರವಾಗಿ ಹೋರಾಟ ನಡೆಸಿದ ಮಹಾನ್ ಪುರುಷ ಎಂದು ಇಂಧನ ಮತ್ತು ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ಆಯೋಜಿಸಿದ್ದ ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ರವರ 118ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

1925ರಲ್ಲಿ ವಿದ್ವಾಂಸ ಪಂಡಿತ್ ಮದನ್ ಮೋಹನ್ ಮಾಳವೀಯ ಅವರನ್ನು ಭೇಟಿಯಾದ ಬಳಿಕ ಅವರಿಂದ ಜಗಜೀವನ್ ರಾಮ್ ಬಹಳ ಪ್ರಭಾವಿತರಾದರು. ಮಾಳವೀಯ ಅವರ ಆಹ್ವಾನದ ಮೇರೆಗೆ ಅವರು ಬನಾರಸ್ ಹಿಂದೂ ವಿಶ್ವವಿದ್ಯಾಲಯವನ್ನು ಸೇರಿದರು. ವಿಶ್ವವಿದ್ಯಾನಿಲಯದಲ್ಲಿಯೂ ಸಹ ಜಗಜೀವನ್ ರಾಮ್ ತಾರತಮ್ಯವನ್ನು ಎದುರಿಸಿದರು. ಇದು ಸಮಾಜದ ಒಂದು ವರ್ಗದ ಸಾಮಾಜಿಕ ಬಹಿ?ರದ ವಿರುದ್ಧ ಪ್ರತಿಭಟಿಸಲು ಅವರಿಗೆ ಸ್ಫೂರ್ತಿ ನೀಡಿತು. ಅನ್ಯಾಯದ ವಿರುದ್ಧ ಪ್ರತಿಭಟಿಸಲು ಅವರು ಪರಿಶಿ? ಜಾತಿಯವರನ್ನು ಸಂಘಟಿಸಿದರು. ಬಿಎಚ್ಯುನಲ್ಲಿ ತಮ್ಮ ಕೆಲಸದ ಸಮಯದ ನಂತರ, ಅವರು ಕೊಲ್ಕತ್ತಾ ವಿಶ್ವವಿದ್ಯಾಲಯಕ್ಕೆ ಸೇರಿ 1931 ರಲ್ಲಿ ಬಿ.ಎಸ್ಸಿ ಪದವಿ ಪಡೆದರು. ಅವರ ಸಂಘಟನಾ ಕೌಶಲ್ಯಕ್ಕಾಗಿ ಸುಭಾ? ಚಂದ್ರ ಬೋಸ್ ಅವರಿಂದ ಗುರುತಿಸಲ್ಪಟ್ಟರು.

1935ರಲ್ಲಿ ಅವರು ಆಲ್–ಇಂಡಿಯಾ ಡಿಪ್ರೆಸ್ಡ್ ಕ್ಲಾಸಸ್ ಲೀಗ್ ರಚನೆಗೆ ಸಹಾಯ ಮಾಡಿದರು. ಅವರು ಕಾಂಗ್ರೆಸ್ ಪಕ್ಷವನ್ನು ಸೇರಿದರು, ಅಲ್ಲಿ ಅವರು ಡಿಪ್ರೆಸ್ಡ್ ಕ್ಲಾಸಸ್ನ ಅದ್ಭುತ ವಕ್ತಾರರಾಗಿ ಮೆಚ್ಚುಗೆ ಪಾತ್ರರಾದರು.

1935 ರಲ್ಲಿ, ಅವರು ಹಿಂದೂ ಮಹಾಸಭಾದ ಅಧಿವೇಶನದಲ್ಲಿ ಕುಡಿಯುವ ನೀರಿನ ಬಾವಿಗಳು ಮತ್ತು ದೇವಾಲಯಗಳು ಅಸ್ಪೃಶ್ಯರಿಗೆ ಮುಕ್ತವಾಗಿರಬೇಕು ಎಂದು ಪ್ರತಿಪಾದಿಸಿದರು. ಅವರು ಸ್ವಾತಂತ್ರ್ಯ ಚಳವಳಿಯಲ್ಲೂ ಭಾಗವಹಿಸಿದ್ದರು ಮತ್ತು ಕ್ವಿಟ್ ಇಂಡಿಯಾ ಚಳವಳಿಯ ಸಮಯದಲ್ಲಿ ಜೈಲುವಾಸ ಅನುಭವಿಸಿದ್ದರು .

ಜವಾಹರಲಾಲ್ ನೆಹರು ತಾತ್ಕಾಲಿಕ ಸರ್ಕಾರವನ್ನು ರಚಿಸಿದಾಗ, ಜಗಜೀವನ್ ರಾಮ್ ಅದರ ಅತ್ಯಂತ ಕಿರಿಯ ಸಚಿವರಾಗಿದ್ದರು. ಸ್ವಾತಂತ್ರ್ಯದ ನಂತರ, ಅವರನ್ನು ದೇಶದ ಮೊದಲ ಕಾರ್ಮಿಕ ಸಚಿವರನ್ನಾಗಿ ನೇಮಿಸಲಾಯಿತು. ಅವರು ರೈಲ್ವೆ, ಆಹಾರ ಮತ್ತು ಕೃಷಿ, ಸಾರಿಗೆ ಮತ್ತು ಸಂವಹನ, ನೀರಾವರಿ ಮತ್ತು ರಕ್ಷಣೆ ಸೇರಿದಂತೆ ವಿವಿಧ ಖಾತೆಗಳನ್ನು ನಿರ್ವಹಿಸಿದ್ದರು. ಅವರು ರಕ್ಷಣಾ ಸಚಿವರಾಗಿದ್ದಾಗ 1971ರ ಭಾರತ–ಪಾಕಿಸ್ತಾನ ಯುದ್ಧ ನಡೆಯಿತು. ತುರ್ತು ಪರಿಸ್ಥಿತಿಯ ನಂತರ ಮೊರಾರ್ಜಿ ದೇಸಾಯಿ ಪ್ರಧಾನಿಯಾದಾಗ ಅವರು ಭಾರತದ ಉಪ ಪ್ರಧಾನ ಮಂತ್ರಿಯೂ ಆಗಿದ್ದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮ್ಮದ್, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಾ.ಬಾಬು ಜಗಜೀವನ್ ರಾಮ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮೂಲಕ ಮೆರವಣಿಗೆಗೆ ಚಾಲನೆ

**ಹಾಸನ** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರ ಸಭೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಇಂದು ಹಮ್ಮಿಕೊಂಡಿರುವ ಡಾ.ಬಾಬು ಜಗಜೀವನ್ ರಾಮ್ ಜನ್ಮದಿನಾಚರಣೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲಿ ಜಿಲ್ಲಾಧಿಕಾರಿ ಸತ್ಯಭಾಮ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್ ಪೂರ್ಣಿಮ, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ ಅವರು ಡಾ.ಬಿ.ಆರ್ ಅಂಬೇಡ್ಕರ್ ರವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ನಂತರ ಡಾ.ಬಾಬು ಜಗಜೀವನ್ ರಾಮ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರೊಂದಿಗೆ ಮೆರವಣಿಗೆಗೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರುಗಳು ಡಾ.ಬಾಬು ಜಗಜೀವನ್ ರಾಮ್ ಅವರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳುವಂತೆ, ಪಾಲಿಸುವಂತೆ ಹೇಳಿ, ದಿನಾಚರಣೆಯ ಶುಭಾಷಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ದೂತ್‌ಪೀರ್ ಹಾಗೂ ಸಮುದಾಯದ ಮುಖಂಡರು ಹಾಗೂ ಮತ್ತಿತರರು ಹಾಜರಿದ್ದರು.

# ನಿಧನ ಸುದ್ದಿಗಳು

## ಎಚ್.ಎಂ. ಚಂದ್ರಶೇಖರಯ್ಯಸ್ವಾಮಿ ನಿಧನ



**ತೋರಣಗಲ್ಲು:** ಹಂಚಿನಹಾಳ್ ಮಠದ ಶ್ರೀಯುತ ಎಚ್.ಎಂ. ಚಂದ್ರಶೇಖರಯ್ಯ (85) ಅಲಿಯಾಸ್ ಶೇಖರಯ್ಯಸ್ವಾಮಿ ಅವರು ಭಾನುವಾರ ಬೆಳಗ್ಗೆ 7.20ರ ಸುಮಾರಿಗೆ ನಿಧನರಾಗಿದ್ದಾರೆ.

ಮೃತರು ಪತ್ನಿ, ಮೂವರು ಪುತ್ರಿಯರು, ಇಬ್ಬರು ಪುತ್ರರು, ಅಳಿಯಂದಿರರು – ಸೊಸೆಯಂದಿರರು, ಮೊಮ್ಮಕ್ಕಳು ಮತ್ತು ಬಂಧುವರ್ಗ, ಆಪ್ತರನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ತೋರಣಗಲ್ಲು ಗ್ರಾಮದಲ್ಲಿ ಭಾನುವಾರ ಸಂಜೆ 3 ಗಂಟೆಯ ನಂತರ ಗುರು ಹಿರಿಯರ ಸಮ್ಮುಖದಲ್ಲಿ ವೀರಶೈವ ವಿಧಿ ಸಂಪ್ರದಾಯಗಳ ಪ್ರಕಾರ ನೆರವೇರಲಿದೆ.

ವಿವರಗಳಿಗಾಗಿ ಎಚ್.ಎಂ. ವೀರೇಶ್ : ಮೊಬೈಲ್ ಸಂಖ್ಯೆ – 90358 65904 ಗೆ ಸಂಪರ್ಕ ಮಾಡಿರಿ.

## ಪಟ್ಟಣದ ಸಮಸ್ಯೆ ಕುರಿತು ಪ.ಪಂ. ಅಧ್ಯಕ್ಷರ ತಿಂಗಳ ಚರ್ಚೆ

**ಮೂಡಿಗೆರೆ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಶನಿವಾರ ಸಂಜೆ ಪತ್ರಿಕಾ ಕಚೇರಿಯಲ್ಲಿ ತಿಂಗಳ ಚರ್ಚೆ ಹಾಗೂ ಮಾಹಿತಿ ಕಾರ್ಯಕ್ರಮ ಸಂಘದ ಅಧ್ಯಕ್ಷ ಪ್ರಸನ್ನ ಕುಮಾರ್ ಅಧ್ಯಕ್ಷತೆಯಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಪ.ಪಂ. ಅಧ್ಯಕ್ಷ ಕೆ.ವೆಂಕಟೇಶ್ ಅವರೊಂದಿಗೆ ಪ.ಪಂ. ವ್ಯಾಪ್ತಿಯ ವಿವಿಧ ಸಮಸ್ಯೆಗಳ ಬಗ್ಗೆ ಗಂಭೀರ ಚರ್ಚೆ ನಡೆಯಿತು. ಅನೇಕ ವರ್ಷದಿಂದ ಪಟ್ಟಣದಲ್ಲಿ ಪಾಳು ಬಿದ್ದಿರುವ ಸಾರ್ವಜನಿಕ ಶೌಚಾಲಯ, ಸ್ವಚ್ಛತೆ, ಪಾರ್ಕಿಂಗ್ ವ್ಯವಸ್ಥೆ, ಗೆಂಡೇಹಳ್ಳಿ ರಸ್ತೆಯಲ್ಲಿ ಕಸ ಸಂಗ್ರಹ ಪ್ರದೇಶದಲ್ಲಿ ದುರ್ನಾತ, ಎಲ್ಲೆಂದರಲ್ಲಿ ತಲೆ ಎತ್ತಿರುವ ಕೋಳಿ, ಮೀನು ಮಾಂಸದ ಅಂಗಡಿಗಳು, ಚರಂಡಿ ನಿರ್ಮಾಣ, ಇ-ಕಾತೆ, ಹೈಮಾಸ್ಕ್ ಲೈಟ್, ಕುಡಿಯುವ ನೀರು, ಪಾರ್ಕ್ ಸೇರಿದಂತೆ ಅನೇಕ ಸಮಸ್ಯೆಗಳ ಬಗ್ಗೆ ಸಂಘ ಸಂಸ್ಥೆ ಮುಖಂಡರು ಹಾಗೂ ಸಾರ್ವಜನಿಕರು ಪ್ರಶ್ನಿಸುವ ಮೂಲಕ ಹಾಗೂ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸುವಂತೆ ಪ.ಪಂ. ಅಧ್ಯಕ್ಷರ ಗಮನ ಸೆಳೆದರು. ಎಲ್ಲಾ ಸಮಸ್ಯೆಗಳನ್ನು ಆಲಿಸಿದ ಪ.ಪಂ. ಅಧ್ಯಕ್ಷ ಕೆ. ವೆಂಕಟೇಶ್ ಮಾತನಾಡಿ, 21 ವರ್ಷದ ನಂತರ ಅಧ್ಯಕ್ಷ ಸ್ಥಾನ ದೊರಕಿದೆ. ತನಗಿರುವ 8 ತಿಂಗಳ ಅವಧಿಯಲ್ಲಿ ಪಟ್ಟಣದವನ್ನು ಸುಂದರಗೊಳಿಸುವ ಮಹದಾಸೆ ಇಟ್ಟುಕೊಂಡಿದ್ದು, ಅದರಂತೆ ಕೆಲ ರೂಪುರೇಷೆಗಳನ್ನು ಸಿದ್ದಪಡಿಸಿಕೊಂಡಿದ್ದೇನೆ. ಈಗಾಗಲೇ ಪ.ಪಂ. ವ್ಯಾಪ್ತಿಯಲ್ಲಿ ಎಲ್ಲೆಲ್ಲಿ ಜಾಗವಿದೆ ಎಂದು ಪರಿಶೀಲಿಸಲಾಗಿದೆ. ಸುಮರು 20ರಿಂದ 30 ಎಕರೆ ಭೂಮಿ ಪ್ರದೇಶದಲ್ಲಿ ಶಾಲೆ, ಆಟದ ಮೈಧಾನ, ಸೈಟ್, ಸರಕಾರಿ ಕಟ್ಟಡ ನಿರ್ಮಿಸಲು ಚಿಂತಿಸಲಾಗಿದೆ ಎಂದು ಹೇಳಿದರು. ಪಟ್ಟಣದಲ್ಲಿ 2 ಹೈಟೆಕ್ ಶೌಚಾಲಯ ನಿರ್ಮಿಸಲಾಗುವುದು. ಈಗ ಮುಚ್ಚಿರುವ 2 ಶೌಚಾಲಯ ತೆರವಿಗೆ ಕ್ರಮ ವಹಿಸಿಸಲಾಗಿದೆ. ಕೋಳಿ, ಮೀನು ಮಾಂಸದಂಗಡಿಯನ್ನು ತೆರವುಗೊಳಿಸಿ ಒಂದೇ ಕಡೆ ಸ್ಥಾಪಿಸಲಾಗುವುದು. 25 ಲಕ್ಷ ರೂ ವೆಚ್ಚದಲ್ಲಿ ಕುಡಿಯುವ ನೀರಿನ ಟ್ಯಾಂಕ್ ನಿರ್ಮಿಸಲಾಗುತ್ತಿದ್ದು, ಕುಡಿಯುವ ನೀರಿಗೆ ಶಾಶ್ವತ ಪರಿಹಾರ ದೊರಕಿಲಿ. ಕೆಲ ಅಂಗಡಿ, ಹೊಟೇಲ್ ಹಾಗೂ ಮನೆಯವರು ರಸ್ತೆ ಬದಿಯಲ್ಲಿ ಕಸ ಹಾಕಿ ಸ್ವಚ್ಛತೆ ಹಾಳು ಮಾಡುತ್ತಿದ್ದಾರೆ. ಕರವೇ ಅಧ್ಯಕ್ಷ ವಿನೋದ್, ಬ್ಯಾರಿ ಒಕ್ಕೂಟದ ಅಧ್ಯಕ್ಷ ಬಿ.ಎಚ್. ಮಹಮ್ಮದ್, ಸಚೇತನ ಯುವ ಸಂಘದ ಅಧ್ಯಕ್ಷ ರವಿರಾಜ್, ಆಟೋ ಸಂಘದ ಕಾರ್ಯದರ್ಶಿ ನಾಗರಾಜ್, ಸ್ಥಳೀಯರಾದ ಎಂ.ಎಸ್.ಕೃಷ್ಣ, ರಾಮು ಛತ್ರಮೈಧಾನ, ಪಟೇಲ್ ಮಂಜು ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

## ನೀರು ಬಿಡುಗಡೆ

**ಶಿವಮೊಗ್ಗ :** ಭದ್ರಾ ಜಲಾಶಯದಿಂದ ಹೊಸಪೇಟೆ ತುಂಗಭದ್ರಾ ಜಲಾಶಯಕ್ಕೆ ಏಪ್ರಿಲ್ 1 ರಿಂದ ನೀರು ಹರಿಸಲಾಗುತ್ತಿರುವುದರಿಂದ, ಭದ್ರಾ ನದಿ ಪಾತ್ರದಲ್ಲಿನ ಜನರು ಎಚ್ಚರಿಕೆಯಿಂದಿರಬೇಕು ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಗಳೂ ಆದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ. ಈ ಕುರಿತಂತೆ ಪ್ರಕಟಣೆ ಬಿಡುಗಡೆ ಮಾಡಿದ್ದು, ರಾಜ್ಯ ಸರ್ಕಾರದ ಆದೇಶದಂತೆ ಕುಡಿಯುವ ನೀರು ಹಾಗೂ ಬೆಳೆ ಸಂರಕ್ಷಣೆ ಉದ್ದೇಶದಿಂದ, ಭದ್ರಾ ಜಲಾಶಯದಿಂದ ತುಂಗಭದ್ರಾ ಜಲಾಶಯಕ್ಕೆ ನೀರು ಹರಿಸಲಾಗುತ್ತಿದೆ. ಏಪ್ರಿಲ್ 1 ರ ಸಂಜೆ 6 ಗಂಟೆಯಿಂದ ಪ್ರತಿನಿತ್ಯ 8 ಸಾವಿರ ಕ್ಯೂಸೆಕ್ ನಂತೆ, ಮೂರು ದಿನಗಳ ಕಾಲ ಭದ್ರಾ ಜಲಾಶಯದಿಂದ ನದಿಗೆ ನೀರು ಹರಿಸಲಾಗುವುದು ಎಂದು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ. ಜಲಾಶಯದಿಂದ ನದಿಗೆ ನೀರು ಹರಿಸುತ್ತಿರುವುದರಿಂದ ನದಿಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದಾಗಲಿ, ಜಾನುವಾರುಗಳ ಮೈ ತೊಳೆಯುವುದು ಹಾಗೂ ದೈನಂದಿನ ಚಟುವಟಿಕೆ ಮಾಡುವುದನ್ನು ನಿರ್ಬಂಧಿಸಲಾಗಿದೆ ಎಂದು ತಿಳಿಸಿದ್ದಾರೆ.ಹಾಗೆಯೇ ನದಿಯಿಂದ ಅನದಿಕೃತವಾಗಿ ವಿದ್ಯುತ್ / ಡಿಸೇಲ್ ಪಂಪ್ ಸೆಟ್ ಹಾಗೂ ಟ್ಯಾಂಕರ್ ಗಳ ಮೂಲಕ ನೀರು ಕೊಂಡೊಯ್ಯುವುದನ್ನೂ ಕೂಡ ನಿಷೇಧಿಸಲಾಗಿದೆ. ನದಿ ಪಾತ್ರದಲ್ಲಿನ ರೈತರು ಹಾಗೂ ಸಾರ್ವಜನಿಕರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಗಳೂ ಆದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಳ್ಳಿ ಥಿಯೇಟರ್‌ಪ್ರಶಸ್ತಿ ಪ್ರಕಟ

**ಶಿವಮೊಗ್ಗ:** ನಮ್ಮ ಹಳ್ಳಿ ಥಿಯೇಟರ್ ನೀಡುವ 2024 – 25 ನೇ ಸಾಲಿನ ವಾರ್ಷಿಕ ಪ್ರಶಸ್ತಿಯನ್ನು ಘೋಷಿಸಿದ್ದು, ರಂಗಭೂಮಿಯ ಸಾಧನೆಗಾಗಿ ಹಿರಿಯ ರಂಗಕರ್ಮಿ ಹಾಗೂ ಸಾಹಿತಿಯಾದ ಡಾ. ಗಜಾನನ ಶರ್ಮ ಹಾಗೂ ಸಮಾಜ ಸೇವೆಗಾಗಿ ಡಾ.ಸಂಧ್ಯಾಕಾವೇರಿಯವರಿಗೆ ಪ್ರಶಸ್ತಿ ಪ್ರಕಟವಾಗಿದೆ. ಪ್ರಶಸ್ತಿಯು ನಗದು, ಪ್ರಶಸ್ತಿ ಫಲಕ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿದ್ದು ಈ ಹಿಂದೆ ಈ ಪ್ರಶಸ್ತಿಗೆ ಪದ್ಮಶ್ರೀ ಹಾಜಬ್ಬ, ಡಾ.ವಿ.ಎಲ್.ಎಸ್ ಕುಮಾರ್, ಡಾ.ರಜನಿ.ಎ.ಪೈ, ಮಾಲತಿ. ಎಸ್, ಸಂದೇಶ್ ಜವಳಿ, ಪುರುಷೋತ್ತಮ ತಲವಾಟ, ಸೇತುರಾಂ ಭಾಜನರಾಗಿದ್ದರು.





## ಮಲೆನಾಡಿನ ಅಪ್ಪಟ ಗ್ರಾಮೀಣ ಕ್ರೀಡೆ

# ಕೆರೆಬೇಟೆ

**ಸೊರಬ:** ಶಿವಮೊಗ್ಗ ಜಿಲ್ಲೆ ಸೊರಬ ಪುರಸಭೆ ವ್ಯಾಪ್ತಿಯ ಕೊಡಕಣಿ ಗ್ರಾಮದ ಚೀಲಕೆರೆಯಲ್ಲಿ ಮಂಗಳವಾರ ಮೀನು ಬೇಟೆ ಸಡಗರ. ನೂರಾರು ಮೀನು ಪ್ರಿಯರು ಕೆರೆ ಬೇಟೆಯಲ್ಲಿ ವಯಸ್ಸಿನ ಬೇಧವಿಲ್ಲದೆ ಪಾಲ್ಗೊಂಡು ಸಂಭ್ರಮಿಸಿದರು.
ಕೆರೆಬೇಟೆ ಮಲೆನಾಡಿನ ಅಪ್ಪಟ ಗ್ರಾಮೀಣ ಕ್ರೀಡೆಗಳಲ್ಲೊಂದಾಗಿದೆ. ಸೊರಬ ತಾಲೂಕಿನಲ್ಲಿ ಅತ್ಯಧಿಕ ಕೆರೆಗಳಿದ್ದು, ವರ್ಷಕ್ಕೊಮ್ಮೆ ನಡೆಯುವ ಈ ಬೇಟೆಯಲ್ಲಿ ಗ್ರಾಮಸ್ಥರು ಉತ್ಸಾಹದಿಂದ ಭಾಗವಹಿಸುತ್ತಾರೆ.ಮುಂಗಾರು ಮಳೆಗೆ ಕೆರೆಗಳು ತುಂಬಿದಾಗ ಗ್ರಾಮಸ್ಥರು ವಿವಿಧ ಜಾತಿಯ ಲಕ್ಷಾಂತರ ಮೀನಿನ ಮರಿಗಳನ್ನು ಬಿಡುತ್ತಾರೆ. ಬೇಸಿಗೆಯಲ್ಲಿ ಕೆರೆಗಳು ಬತ್ತಿದಾಗ ಗ್ರಾಮದಲ್ಲಿ ಕೆರೆಬೇಟೆ ಸಾರುತ್ತಾರೆ. ಆ ಕೂಡಲೆ ಮೀನು ಹಿಡಿಯುವ, ತಿನ್ನುವ ಪ್ರಿಯರಿಗೆ ಎಲ್ಲಿಲ್ಲದ ಸಂಭ್ರಮ. ಹೆಚ್ಚುವರಿಯಾದ ಮೀನನ್ನು ಒಣಗಿಸಿಕೊಂಡು 6 ತಿಂಗಳುಗಳ ಕಾಲ ತಿನ್ನುವುದೂ ಇದೆ. ಇದೆಲ್ಲದರ ನಡುವೆ ಒಂದು ಹಬ್ಬವಾಗಿ ಕೆರೆಬೇಟೆಯನ್ನು ಸಂಭ್ರಮಿಸುತ್ತಾರೆ.ಕೊಡಕಣಿ ಗ್ರಾಮದಲ್ಲಿ ನಡೆದ ಕೆರೆಬೇಟೆಯಲ್ಲಿ ಕೂಣಿ ಹಾಗೂ ಜರಡಿ ಬಲೆಗೆ ಅವಕಾಶ ಕಲ್ಪಿಸಲಾಗಿತ್ತು. ಗ್ರಾಮಸ್ಥರು ಮಾತ್ರವೇ ಕೆರೆಬೇಟೆಗೆ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಆದರೂ ಸಹ ಗ್ರಾಮಸ್ಥರು ತಮ್ಮ ಸಂಬಂಧಿಗಳನ್ನು ಕೆರೆಗೆ ಇಳಿಸಿ ಹಬ್ಬ ಮಾಡಿ ಸಂಭ್ರಮಿಸಿದರು. ಗ್ರಾಮ ಸಮಿತಿಯಿಂದ ಯಾವುದೇ ಗಲಾಟೆ ಮತ್ತು ಗೊಂದಲಗಳಿಗೆ ಅವಕಾಶ ನೀಡದಂತೆ ಅಚ್ಚುಕಟ್ಟಾಗಿ ನಿರ್ವಹಿಸಿದರು.

# ಸಾಹಿತ್ಯ ನೆಲೆಯೂರಿಸಿದರೆ ಜಾತೀಯತೆ ವಿಷಬೀಜ ಕರಗಲಿದೆ : ಕುಮಾರಸ್ವಾಮಿ

**ಚಿಕ್ಕಮಗಳೂರು :** ಸಾಹಿತ್ಯಾತ್ಮಕ ಚಟುವಟಿಕೆಗಳು ಜನಸಾಮಾನ್ಯರಲ್ಲಿ ಮನಸ್ಸಿನಲ್ಲಿ ಅಚ್ಚ ಳಿಯದೇ ನೆಲೆಯೂರಿಸಿದರೆ, ಪರಸ್ಪರ ಪ್ರೀತಿ ಹೆಚ್ಚಾಗಿ ಜಾತೀಯತೆ ಮತ್ತು ಕೋಮುವಾದದ ವಿಷಬೀಜ ಕರ ಗಲಿದೆ ಎಂದು ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ ಹೇಳಿದರು.

ನಗರದ ಬಸವನಹಳ್ಳಿ ಬಾಲಿಕಾ ಸರ್ಕಾರಿ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಏರ್ಪಡಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತು ವಸ್ತಾರೆ ಹೋಬಳಿ ಸೇವಾದೀಕ್ಷ ಸಮಾರಂಭದಲ್ಲಿ ಶನಿವಾರ ಸಂಜೆ ಪಾಲ್ಗೊಂಡು ಅವರು ಮಾತನಾಡಿದರು.

ಬಡವರು, ಕೂಲಿಕಾರ್ಮಿಕರಲ್ಲಿ ಕನ್ನಡ ಭಾಷಾಭಿಮಾನ ಹೆಚ್ಚಿದೆ. ಆದರೆ ಶ್ರೀಮಂತ ಕುಟುಂಬದಲ್ಲಿ ಆಂಗ್ಲಭಾಷೆ ವ್ಯಾಮೋಹದಿಂದ ಕನ್ನಡ ನಶಿಸುತ್ತಿದೆ. ಹೀಗಾಗಿ ಕನ್ನಡಾಭಿಮಾನಿಗಳು ಮೊದಲು ಉಳ್ಳವರ ಕುಟುಂಬಕ್ಕೆ ಭಾಷಾಭಿಮಾನ ಮೂಡಿಸುವ ಮೂಲಕ ನಾಡಿನ ಭಾಷಾಸಂಸ್ಕೃತಿ ಎತ್ತಿಹಿಡಿಯಬೇಕು ಎಂದು ಸಲಹೆ ಮಾಡಿದರು.

ಮಾತೃಭಾಷೆ ಬಗ್ಗೆ ಅಪಾರ ಅಭಿಮಾನವಿರಬೇಕು. ದುರಾಭಿಮಾನ ಇರಕೂಡದು. ನೂರಾರು ಭಾಷೆ



ಕಲಿಯುವುದರಲ್ಲಿ ತಪ್ಪಿಲ್ಲ. ಬೇರೆ ಭಾಷೆಗಳ ಅಬ್ಬರದಲ್ಲಿ ತಾಯ್ನುಡಿ ಕ್ಷೀಣಿಸದಿರಲಿ. ದೇಶ-ವಿದೇಶಗಳಲ್ಲಿ ಪ್ರವಾಸಕ್ಕೆ ತೆರಳಿದಲ್ಲಿ ಅಲ್ಲಿ ಕನ್ನಡಿಗರು ಸಿಕ್ಕರೆ ಅಪ್ಪ-ಅಮ್ಮ ಸಿಕ್ಕಂತೆ ಎಂದ ಅವರು ಹೆಚ್ಚಿನ ಪ್ರಾಮುಖ್ಯತೆ ಕನ್ನಡಗಿರಬೇಕು ಎಂದರು.

ವೇದಿಕೆ ಅಥವಾ ಸಮಾರಂಭಕ್ಕೆ ಕಾರ್ಯಕ್ರಮ ಸೀಮಿತರಾಗದೇ, ಹೋಬಳಿ ಅಧ್ಯಕ್ಷರು ಪ್ರತಿ ಗ್ರಾಮ ಗಳಲ್ಲಿ ತೆರಳಿ ಜಾನಪದ, ಸಾಹಿತ್ಯ, ಸಂಗೀತ, ಗಮಕದಂಥ ಶಿಬಿರ ಹಮ್ಮಿಕೊಂಡು ಸ್ಥಳೀಯ ಕಲಾವಿದರು, ಬರಹಗಾರರು, ಲೇಖಕರಿಗೆ ಪ್ರೋತ್ಸಾಹಿಸಿ ಮುಂಚೂಣಿಗೆ ಕರೆತರಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕಸಾಪ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಪಂಪ, ರನ್ನ, ಕನಕ ದಾಸರು, ಪುರಂದರದಾರು, ಕುವೆಂಪು, ಪೂರ್ಣಚಂದ್ರ ತೇಜಸ್ವಿ ಮಹಾನೀಯರ ಸಂಪೂರ್ಣ ಬದುಕು ಕನ್ನಡಕ್ಕೆ ಮುಡಿಪಾಗಿತ್ತು. ಆ ಕನ್ನಡ ಪರಂಪರೆ ಉಳಿಸಿ, ಬೆಳೆಸುವ ಜವಾಬ್ದಾರಿ ಹೊತ್ತಿರುವ ಹೋಬಳಿ ಅಧ್ಯ ಕ್ಷರು ಜಾಗೃತರಾಗಿ ಮುನ್ನಡೆಸಬೇಕು ಎಂದರು.

ಮಾಜಿ ಸಚಿವ ಬಿ.ಬಿ.ನಿಂಗಯ್ಯ ಮಾತನಾಡಿ ಎಂಟು ಜ್ಞಾನಪೀಠ ಪ್ರಶಸ್ತಿಗೆ ಕನ್ನಡನಾಡು ಭಾಜನವಾಗಿದೆ. ಹೀಗಾಗಿ ನಾಡಿನಲ್ಲಿ ವಾಸಿಸುವ ಅನ್ಯಭಾಷಿಗರಿಗೆ ಮೊದಲು ಕನ್ನಡ ಭಾಷೆ ಹಿರಿಮೆ, ಗರಿಮೆ ಕಲಿಸುವಂಥ ಕೆಲಸವನ್ನು ಕಸಾಪ ಮಾಡಬೇಕು. ಜೊತೆಗೆ ನಾಡು, ನುಡಿಗೆ ಧಕ್ಕೆಯಾದರೆ ಧೈರ್ಯವಾಗಿ ಎದುರಿಸುವ ಶಕ್ತಿ ಯನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ವಸ್ತಾರೆ ಹೋಬಳಿ ನೂತನ ಅಧ್ಯಕ್ಷ ಡಾ.ಸತೀಶ್ ಜಕ್ಕನಹಳ್ಳಿ ಮಾತನಾಡಿ ಹಿರಿಯರ ಮಾರ್ಗದರ್ಶನ ದಲ್ಲಿ ಹೋಬಳಿ ಮಟ್ಟದಲ್ಲಿ ಕಸಾಪ ಕಾರ್ಯಕ್ರಮ ಹಮ್ಮಿಕೊಂಡು ಕನ್ನಡತಾಯಿಯ ಸೇವೆಯಲ್ಲಿ ತೊಡಗಲಾ ಗುವುದು. ಜೊತೆಗೆ ಸ್ಥಳೀಯರಿಗೆ ಹೆಚ್ಚಿನ ಆದ್ಯತೆ ನೀಡಿ ಪ್ರೋತ್ಸಾಹಿಸುತ್ತೇನೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಸಾಪ ತಾಲ್ಲೂಕು ಅಧ್ಯಕ್ಷ ಮಾವಿನಕೆರೆ ದಯಾನಂದ್ ವಹಿಸಿದ್ದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್.ಎಸ್. ವೆಂಕಟೇಶ್ ಸೇವಾಧೀಕ್ಷೆ ಬೋಧಿಸಿದರು.

ವಸ್ತಾರೆ ಹೋಬಳಿ ನೂತನ ಘಟಕ : ಡಾ.ಸತೀಶ್ ಜಕ್ಕನಹಳ್ಳಿ (ಅಧ್ಯಕ್ಷರು), ಎ.ಬಿ.ರುದ್ರೇಗೌಡ (ಗೌ. ಅಧ್ಯಕ್ಷ), ವಿ.ಎನ್.ಸಂದೀಪ್, ಮಮತ ಯೋಗೀಶ್ (ಗೌ.ಕಾರ್ಯದರ್ಶಿ), ಟಿ.ಜಿ.ಸುದೀಪ್ (ಕೋಶಾಧ್ಯಕ್ಷ), ತಮ್ಮಣ್ಣಗೌಡ, ವಿ.ಆರ್. ಪ್ರವೀಣ್‌ಕುಮಾರ್, ಕಾರ್ತೀಕ್ (ಸಹ ಕಾರ್ಯದರ್ಶಿ), ಚಂದ್ರಶೇಖರ್, ಬಸವರಾ ಜು, ಸಂದೇಶ್, ಮೋಹನ್ (ಸಂಘಟನಾ ಕಾರ್ಯದರ್ಶಿ) ಮತ್ತಿತರರು ಆಯ್ಕೆಯಾದರು.

ಈ ಸಂದರ್ಭದಲ್ಲಿ ಕಸಾಪ ನಿಕಟಪೂರ್ವ ಗೌರವ ಕಾರ್ಯದರ್ಶಿ ಡಿ.ಎಂ.ಮಂಜುನಾಥಸ್ವಾಮಿ, ತಾಲ್ಲೂಕು ಕಸಾಪ ಗೌರವ ಕಾರ್ಯದರ್ಶಿ ಟಿ.ಸಂದೀಪ್, ನಗರಾಧ್ಯಕ್ಷ ಸಚಿನ್, ಅಂಬಳೆ ಹೋಬಳಿ ಕಸಾಪ ಅಧ್ಯಕ್ಷ ಮಾಸ್ತೇಗೌಡ ಮತ್ತಿತರರು ಉಪಸ್ಥಿತರಿದ್ದರು.

## ಈಡಿಗ ಸಮಾಜ ಗೌರವದಿಂದ ಬದುಕುತ್ತಿದೆ ಅದಕ್ಕೆ ಎಸ್.ಬಂಗಾರಪ್ಪ ಕಾಗೋಡು ತಿಮ್ಮಪ್ಪ ಕೊಡುಗೆ ಕಾರಣವಾಗಿದೆ

**ಸಾಗರ :** ಈಡಿಗ ಸಮಾಜ ಗೌರವದಿಂದ ಬದುಕುತ್ತಿದೆ ಎಂದರೆ ಅದಕ್ಕೆ ಎಸ್.ಬಂಗಾರಪ್ಪ ಮತ್ತು ಕಾಗೋಡು ತಿಮ್ಮಪ್ಪ ಅವರ ಕೊಡುಗೆ ಕಾರಣವಾಗಿದೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು. ಇಲ್ಲಿನ ವರದಹಳ್ಳಿ ರಸ್ತೆಯಲ್ಲಿರುವ ಈಡಿಗರ ಸಮುದಾಯ ಭವನದಲ್ಲಿ ಸೋಮವಾರ ಪ್ರಾಂತ್ಯ ಆರ್ಯ ಈಡಿಗ ಸಂಘದ ವತಿಯಿಂದ ಬೆಳ್ಳಿಹಬ್ಬ ಅಂಗವಾಗಿ ಜೋಗ ರಸ್ತೆಯಲ್ಲಿ ನಿರ್ಮಿಸುತ್ತಿರುವ ನೂತನ ಸಮುದಾಯ ಭವನ, ವಾಣಿಜ್ಯ ಮಳಿಗೆಗಳ ಶಂಕುಸ್ಥಾಪನೆ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ನಾವು ತಿನ್ನುವ ಒಂದೊಂದು ಅನ್ನದ ಅಗಳಿನ ಮೇಲೂ ಕಾಗೋಡು ತಿಮ್ಮಪ್ಪ ಅವರ ಹೆಸರು ಇದೆ. ಕಾಗೋಡು ಚಳುವಳಿ ಮೂಲಕ ನಮಗೆಲ್ಲಾ ಭೂಮಿಹಕ್ಕು ಕೊಡಿಸುವ ಕೆಲಸವನ್ನು ಕಾಗೋಡು ತಿಮ್ಮಪ್ಪ ಮಾಡಿದ್ದಾರೆ. ಕಾಗೋಡು ತಿಮ್ಮಪ್ಪ ಮತ್ತು ಎಸ್.ಬಂಗಾರಪ್ಪ ನಮ್ಮ ಸಮಾಜದ ದೊಡ್ಡಶಕ್ತಿ. ಅವರ ರಾಜಕೀಯ ಹೋರಾಟವೇ ನಾವು ಭೂಮಿಹಕ್ಕನ್ನು ಪಡೆದು ಇಂದು ಗೌರವಯುತವಾಗಿ ಬದುಕಲು ಕಾರಣವಾಗಿದೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುವುದೆ ನಮ್ಮ ಜವಾಬ್ದಾರಿಯಾಗಿದೆ ಎಂದರು.ಸಿಗಂದೂರು ದೇವಸ್ಥಾನ ನಮ್ಮ ಹಿಂದುಳಿದ ವರ್ಗಕ್ಕೆ ಸೇರಿದ್ದಾಗಿದ್ದು ಅದನ್ನು ನಮ್ಮ ಸಮುದಾಯದಲ್ಲಿ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುತ್ತದೆ. ಇದಕ್ಕೆ ನಾನು ಮತ್ತು ಶಾಸಕ ಗೋಪಾಲಕೃಷ್ಣ ಬೇಳೂರು ಎಲ್ಲ ರೀತಿಯ ಪ್ರಯತ್ನ ಮಾಡುತ್ತೇವೆ. ಶರಾವತಿ ಮುಳುಗಡೆ ಸಂತ್ರಸ್ತರಿಗೆ ಶೇ. 100 ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಸಿದ್ದರಾಮಯ್ಯ ನೇತೃತ್ವದ ನಮ್ಮ ಸರ್ಕಾರ ಬದ್ಧವಿದೆ. ಸಮುದಾಯವನ್ನು ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ ಮುಖ್ಯವಾಹಿನಿಗೆ ತರಲು ಎಲ್ಲರೂ ಪ್ರಯತ್ನ ನಡೆಸಬೇಕು ಎಂದು ತಿಳಿಸಿದರು. ಜೋಗ ರಸ್ತೆಯಲ್ಲಿ ನಿರ್ಮಿಸುತ್ತಿರುವ ನೂತನ ಸಮುದಾಯ ಭವನ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಶಾಸಕ ಗೋಪಾಲಕೃಷ್ಣ ಬೇಳೂರು, ಸಮಾಜದ ವಿಷಯ ಬಂದಾಗ ಎಲ್ಲರೂ ಒಗ್ಗಟ್ಟಾಗಿರಬೇಕು. ಸಮಾಜದ ಅಭಿವೃದ್ಧಿಗೆ ನಾವೆಲ್ಲಾ ಒಟ್ಟಾಗಿ ಹೆಜ್ಜೆ ಹಾಕಬೇಕಾಗಿದೆ. ಕಾಲಕಾಲಕ್ಕೆ ಸಮಾಜಕ್ಕೆ ನಮ್ಮ ಕೈಲಾದ ಸಹಾಯ ಮಾಡಬೇಕು. ಸಮಾಜದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಅಗತ್ಯ ಕ್ರಮವನ್ನು ಸಂಘವು ಕೈಗೊಳ್ಳಬೇಕು ಎಂದು ಹೇಳಿದರು.

# ಸಿಹಿ ಬಂದಾಗ ಹಿಗ್ಗದೆ, ಕಹಿ ಬಂದಾಗ ಕುಗ್ಗದೆ ಎರಡನ್ನೂ ಸಮಾನವಾಗಿ ಸ್ವೀಕರಿಸಬೇಕು

**ಹೊಸದುರ್ಗ:** ಬೇವು ಕಹಿಯನ್ನು ನೆನಪಿಸಿದರೆ ಬೆಲ್ಲ ಸಿಹಿಯನ್ನು ನೆನಪಿಸುವುದು. ಬದುಕು ಸಿಹಿ, ಕಹಿಗಳ ಸಮ್ಮಿಶ್ರಣ. ಸಿಹಿ ಬಂದಾಗ ಹಿಗ್ಗದೆ, ಕಹಿ ಬಂದಾಗ ಕುಗ್ಗದೆ ಎರಡನ್ನೂ ಸಮಾನವಾಗಿ ಸ್ವೀಕರಿಸಬೇಕು ಎಂದು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಹೇಳಿದರು.
ತಾಲೂಕಿನ ಸಾಣೇಹಳ್ಳಿ ಶ್ರೀಮಠದ ಆವರಣದಲ್ಲಿ ವಿದ್ಯಾರ್ಥಿಗಳೊಂದಿಗೆ ಹಾಗೂ ಭಕ್ತರೊಂದಿಗೆ ಯುಗಾದಿ ಚಂದ್ರದರ್ಶನದ ಚಿಂತನ-ಮಂಥನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.
ಭಾರತೀಯರಿಗೆ ಯುಗಾದಿಯೇ ಹೊಸ ವರ್ಷ. ಅಲ್ಲಿಂದಲೇ ನಮ್ಮ ಚಟುವಟಿಕೆಗಳು ಪ್ರಾರಂಭವಾಗುವುದು. ಪ್ರಕೃತಿಯಲ್ಲಿ ಅನೇಕ ಬದಲಾವಣೆಗಳನ್ನು ಈ ಸಂದರ್ಭದಲ್ಲಿ ಕಾಣಬಹುದು. 'ಹಳೆಬೇರು ಹೊಸ ಚಿಗುರು ಕೂಡಿರಲು ಮರ ಸೊಬಗು' ಎನ್ನುವಂತೆ ಗಿಡ ಮರಗಳು ಹಣ್ಣೆಲೆಗಳನ್ನು ಕಳಚಿಕೊಂಡು ಹೊಸ ಚಿಗುರೊಡೆದು ಪ್ರಕೃತಿಮಾತೆಗೆ ಹಸಿರು ಸೀರೆ ಉಡಿಸಿದಂತೆ ಕಾಣುವುದು.
ಯುಗಾದಿಯ ಸಂದರ್ಭದಲ್ಲಿ ಬೇವಿನ ಸೊಪ್ಪನ್ನು ನೀರಲ್ಲಿ ಹಾಕಿ ಸ್ನಾನ ಮಾಡುವುದು, ಬೇವು-ಬೆಲ್ಲ ತಿನ್ನುವುದು ಪದ್ಧತಿ. ಬೇವಿನ ನೀರು ಅನೇಕ ಚರ್ಮರೋಗಗಳನ್ನು ವಾಸಿ ಮಾಡುವುದು.
ಭಾರತ ಹಲವು ಧರ್ಮ, ಜಾತಿ, ಭಾಷೆ, ಸಂಸ್ಕೃತಿ, ಜನಾಂಗಗಳ ಶಾಂತಿಯ ತೋಟ. ಇಲ್ಲಿ ಅನೇಕ ಹಬ್ಬ, ಹುಣ್ಣಿಮೆಗಳ ಆಚರಣೆ ಪರಂಪರೆಯಿಂದಲೂ ನಡೆದುಕೊಂಡು ಬಂದಿದೆ. ಇಂಥಹ ಹಬ್ಬಗಳಲ್ಲಿ ಭಾರತೀಯರ ಪಾಲಿಗೆ ತುಂಬಾ ಮಹತ್ವದ ಹಬ್ಬ ಯುಗಾದಿ. ಆ ಪದವೇ ಹೇಳುವಂತೆ ಆ ವರ್ಷದ ಮೊದಲ ದಿನ. ಯುಗ ಯುಗಗಳನ್ನು ಕಳೆದರೂ ಯುಗಾದಿ ಮತ್ತೆ ಮರಳಿ ಬರುತ್ತದೆ ಎಂದರು.
ಈ ಸಂದರ್ಭದಲ್ಲಿ ಎಸ್ ಆರ್ ಚಂದ್ರಶೇಖರಯ್ಯ, ಶಶಾಂಕ ಮಾತನಾಡಿದರು. ಎಸ್ ಎಸ್ ಪ್ರಕಾಶ್ , ಎಸ್ ಷಡಾಕ್ಷರಿ, ವಿದ್ಯಾರ್ಥಿಗಳು ಊರಿನ ಗ್ರಾಮಸ್ಥರು ಉಪಸ್ಥಿತರಿದ್ದರು.



## ರಾಜೀನಾಮೆ ಕೊಟ್ಟಿಲ್ಲ: ಸಭಾಪತಿ

**ಬೆಂಗಳೂರು:** ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ ಎಂಬ ಸುದ್ದಿ ವೈರಲ್ ಆಗತೊಡಗಿದ್ದರ ಬೆನ್ನಲ್ಲೇ ಬಸವರಾಜ್ ಹೊರಟ್ಟಿ ಸ್ವತಃ ಸ್ಪಷ್ಟನೆ ನೀಡಿದ್ದಾರೆ.ತಮ್ಮ ರಾಜೀನಾಮೆ ವಿಷಯ ವೈರಲ್ ಆಗುತ್ತಿದ್ದಂತೆಯೇ ಪ್ರತಿಕ್ರಿಯೆ ನೀಡಿರುವ ಹೊರಟ್ಟಿ, ಹನಿಟ್ರ್ಯಾಪ್ ನಂತಹ ಪ್ರಕರಣಗಳು ಸದನದಲ್ಲಿ ಕೇಳಿ ಬರುತ್ತಿವೆ. ಚಿಂತಕರ ಚಾವಡಿ ಎನಿಸಿಕೊಂಡಿರುವ ವಿಧಾನ ಪರಿಷತ್ನಲ್ಲಿ ಎಲ್ಲವೂ ಸರಿಯಿಲ್ಲ. ಕಾಲ ಕೆಟ್ಟಿದ್ದು, ರಾಜಕಾರಣ ಬಹಳ ಕಲುಷಿತ ಆಗಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ವಿಧಾನ ಪರಿಷತ್ ನ ಗೌರವ ಕಳೆದು ಹೋಗಿ ಬಹಳ ದಿನ ಆಗಿದೆ. ಇಂತಹ ಸಮಯದಲ್ಲಿ ಸಭಾಪತಿಯಾಗಿ ಮುಂದುವರೆಯುವದೋ ಬೇಡವೋ ಎಂಬ ಗೊಂದಲ ಉಂಟಾಗಿದ್ದು ನಿಜ. ಸದನದ ಸದಸ್ಯರ ವರ್ತನೆಯಿಂದ ಬೇಸತ್ತು ಹೋಗಿದ್ದೇನೆ ಎಂದು ಹೊರಟ್ಟಿ ಹೇಳಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ನಾನು ರಾಜೀನಾಮೆ ನೀಡಬೇಕು ಅಂತ ತೀರ್ಮಾನ ಮಾಡಿದ್ದು ನಿಜ. ನನ್ನ ಕಚೇರಿಯಿಂದ ನಾನು ಸಹಿ ಮಾಡದ ಪತ್ರದ ಫೋಟೋ ವೈರಲ್ ಆಗತೊಡಗಿದೆ. ರಾಜೀನಾಮೆಗೆ ಸಹಿ ಮಾಡಿರುವ ಪತ್ರ ನನ್ನ ಬಳಿಯೇ ಇದೆ ಎಂದು ಸ್ಪಷ್ಟನೆ ನೀಡಿದ್ದಾರೆ. ಈ ಮೂಲಕ ಇಲ್ಲಿಯವರೆಗೂ ತಾವು ರಾಜೀನಾಮೆ ಸಲ್ಲಿಸಿಲ್ಲ ಎಂಬುದನ್ನು ಹೊರಟ್ಟಿ ಸ್ಪಷ್ಟಪಡಿಸಿದ್ದಾರೆ.ಸದನದಲ್ಲಿ ಮೊನ್ನೆ ನಡೆದ ಘಟನೆ ಮನಸ್ಸಿಗೆ ಬಹಳ ನೋವಾಗಿದೆ. ಕುರ್ಚಿ ಆಸೆಗೆ ಕೂರೋದು ಸರಿಯಲ್ಲ ಅಂತ ನನಗೆ ಅನ್ನಿಸಿದೆ. ನನ್ನ ಆಪ್ತರು ನನಗೆ ರಾಜೀನಾಮೆ ನೀಡಬೇಡಿ ಅಂತ ಒತ್ತಾಯ ಮಾಡ್ತಿದ್ದಾರೆ. ಹೀಗಾಗಿ ನಾನು ಸ್ವಲ್ಪ ವಿಚಾರ ಮಾಡ್ತೇನೆ. ಇನ್ನು ಮೂರ್ನಾಲ್ಕು ದಿನದಲ್ಲಿ ರಾಜೀನಾಮೆ ನೀಡುವ ಬಗ್ಗೆ ನಿರ್ಧಾರ ಕೈಗೊಳ್ಳುತ್ತೇನೆ ಎಂದು ಬಸವರಾಜ ಹೊರಟ್ಟಿ ಅವರು ತಿಳಿಸಿದ್ದಾರೆ.

## ಎಚ್.ಸಿ.ಬಾಲಕೃಷ್ಣ ಆಪ್ತನ ಕಗ್ಗೊಲೆ

**ಬೆಂಗಳೂರು:** ಮಾಗಡಿ ಶಾಸಕ ಎಚ್ .ಸಿ ಬಾಲಕೃಷ್ಣ ಆಪ್ತ ಲೋಕನಾಥ್ ಸಿಂಗ್ ಗೆ ಚಾಕುವಿನಿಂದ ಇರಿದು ಹತ್ಯೆ ಮಾಡಿರುವ ಘಟನೆ ಬೆಂಗಳೂರಿನ ಬಿಜಿಎಸ್ ಲೇಔಟ್ನ ನಿರ್ಮಾಣ ಹಂತದ ಕಟ್ಟಡದಲ್ಲಿ ನಡೆದಿದೆ. ರಿಯಲ್ ಎಸ್ಟೇಟ್ ವ್ಯವಹಾರ ನಡೆಸುತ್ತಿದ್ದ ಲೋಕನಾಥ್ ಸಿಂಗ್ ನಿನ್ನೆ ಸಂಜೆ 5 ಗಂಟೆ ಸುಮಾರಿಗೆ ಸ್ನೇಹಿತರ ಜತೆ ಸೋಲದೇವನಹಳ್ಳಿಯ ಬಿಳಿಜಾಜಿಯ ಬಿಜಿಎಸ್ ಲೇಔಟ್ನಲ್ಲಿರುವ ನಿರ್ಮಾಣ ಹಂತದ ಕಟ್ಟಡದ ಬಳಿ ಕಾರಿನಲ್ಲೇ ಕುಳಿತು ಮದ್ಯ ಸೇವಿಸುತ್ತಿದ್ದರು. ಈ ವೇಳೆ ಯಾವುದೋ ವಿಚಾರಕ್ಕೆ ಜತೆಯಲ್ಲಿದ್ದವರೇ ಲೋಕನಾಥ್ ಸಿಂಗ್ ಕುತ್ತಿಗೆಗೆ ಚಾಕುವಿನಿಂದ ಚುಚ್ಚಿದ್ದಾರೆ. ತೀವ್ರ ರಕ್ತಸ್ರಾವದಿಂದ ಲೋಕನಾಥ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲಿಯ ಕ್ಯಾಮೆರಾಗಳನ್ನು ಪರಿಶೀಲಿಸುತ್ತಿದ್ದು, ಆರೋಪಿಗಳ ಪತ್ತೆಗೆ ವಿಶೇಷ ತಂಡ ರಚಿಸಲಾಗಿದೆ.

## ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ವಿರುದ್ಧ ಎಫ್ಐಆರ್

**ಬೆಂಗಳೂರು:** ಮೀನು ಕದ್ದ ಆರೋಪದ ಮೇಲೆ ಮಹಿಳೆಯೊಬ್ಬರನ್ನು ಮರಕ್ಕೆ ಕಟ್ಟಿ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಲ್ಪೆ ಬಂದರಿನಲ್ಲಿ ಮಲ್ಪೆ ಮೀನುಗಾರರ ಸಂಘ ಮತ್ತು ಇತರ ಸಂಘಟನೆಗಳು ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಪ್ರಚೋದನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ವಿರುದ್ಧ ಮಲ್ಪೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಪ್ರತಿಭಟನೆ ವೇಳೆ ಮಾತನಾಡಿದ್ದ ಮಧ್ವರಾಜ್, ಮಹಿಳೆಯನ್ನು ಕಟ್ಟಿಹಾಕಿ ಹಲ್ಲೆ ಮಾಡಿದ್ದನ್ನು ಸಮರ್ಥಿಸಿಕೊಂಡಿದ್ದರು. ಕಳ್ಳರು ನಮ್ಮ ಮನೆಗೆ ಪ್ರವೇಶಿಸಿದರೆ, ನಾವು ಏನು ಮಾಡಬೇಕು? ಪೊಲೀಸರು ಬರುವವರೆಗೂ ಕಾಯಬೇಕ. ಕಳ್ಳನಿಗೆ ಬುದ್ದಿ ಕಲಿಸಬೇಕಲ್ವ, ಥಳಿಸಿದ್ದು ಸರಿ ಎಂದು ಹೇಳಿದ್ದರು. ಹೀಗಾಗಿ ಮಲ್ಪೆ ಪೊಲೀಸರು ಮಧ್ವರಾಜ್ ವಿರುದ್ಧ ಸುಮೋಟೋ ಕೇಸು ದಾಖಲಿಸಿದ್ದಾರೆ. ಇನ್ನು ಪ್ರಕರಣ ಸಂಬಂಧ ಐವರನ್ನು ಪೊಲೀಸರು ಬಂಧಿಸಿದ್ದಾರೆ.

## ಮದ್ದೂರಮ್ಮ ಜಾತ್ರೆ ತೇರು ಉರುಳಿ ಇಬ್ಬರು ಸಾವು

**ಬೆಂಗಳೂರು:** ಬೆಂಗಳೂರು ಗ್ರಾಮಾಂತರದ ಹುಸ್ಕೂರು ಮದ್ದೂರಮ್ಮ ಜಾತ್ರೆಯಲ್ಲಿ 150 ಅಡಿ ಎತ್ತರದ ತೇರು ಉರುಳಿಬಿದ್ದು ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಯುವತಿ ಜ್ಯೋತಿ ಇಂದು ಸಾವನ್ನಪ್ಪಿದ್ದಾರೆ. ನಿನ್ನೆ ಮದ್ದೂರಮ್ಮ ಜಾತ್ರೆ ನಡೆಯುತ್ತಿತ್ತು. ದೊಡ್ಡನಾಗಮಂಗಲ ಗ್ರಾಮಸ್ಥರು ತೇರನ್ನು ಕಟ್ಟಿ ಎತ್ತುಗಳ ಮೂಲಕ ಎಳೆದುಕೊಂಡು ಹುಸ್ಕೂರಿನತ್ತ ಹೊರಟಿದ್ದಾಗ ಚಿಕ್ಕನಾಗಮಂಗಲ ಸಮೀಪ ತೇರು ಆಯತಪ್ಪಿ ದಿಢೀರನೇ ಧರೆಗುರುಳಿತ್ತು. ಇನ್ನು ತೇರಿನ ಕೆಳಗೆ ಸಿಲುಕಿ ತಮಿಳುನಾಡಿನ ಹೊಸೂರು ಮೂಲದ 28 ವರ್ಷದ ಯುವಕ ಲೋಹಿತ್ ನಿನ್ನೆಯೇ ಸಾವನ್ನಪ್ಪಿದ್ದರು. ದುರ್ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿರುವ ಮತ್ತೊಬ್ಬ ಯುವಕ ರಾಕೇಶ್ ಸದ್ಯ ಸಾವು ಬದುಕಿನ ಮಧ್ಯೆ ಹೋರಾಟ ನಡೆಸುತ್ತಿದ್ದಾರೆ.



# ಬಿಸಿಲೂರಿನಲ್ಲಿ ಹುಣಸೆ ಸುಗ್ಗಿ!



**ಮೊಳಕಾಲ್ಮೂರು:** 'ಬಯಲು ಸೀಮೆ ಎಂದಾಕ್ಷಣ ನೆನಪಾಗುವುದು ಮೊಳಕಾಲ್ಮೂರು ತಾಲೂಕಿನ ಬತ್ತಿದ ಅಂತರ್ಜಲ, ಕಣ್ಣಾಯಿಸಿದಷ್ಟು ದೂರ ಬಯಲು, ಕುರುಚಲು ಕಾಡುಗಳು, ಸುತ್ತಲೂ ರಕ್ಷಣೆಗೆ ನಿಂತಂತಿರುವ ಶಿಲಾ ಬೆಟ್ಟಗಳು, ಅದರ ಬಿಸಿಲಿನ ಧಗೆ...' ಇಂತಹ ಬೆಂಗಾಡಿನಲ್ಲಿ ಸದ್ದಿಲ್ಲದೆ ಹುಣಸೆ ಸುಗ್ಗಿ ಮಾನೆ ಮಾಡಿದೆ.

ತಾಲೂಕಿನಲ್ಲಿ ಸಾಕಷ್ಟು ಹುಣಸೆ ಮರಗಳಿಲ್ಲದಿದ್ದರೂ ಹುಣಸೆ ಹಣ್ಣಿನ ಕಣಜ ಎಂದೇ ಕರೆಯಲ್ಪಡುವ ಕೂಡ್ಲಿಗಿ ತಾಲೂಕಿನ ಹಳ್ಳಿಗಳ ರೈತರ ಮರಗಳನ್ನು ವಾರ್ಷಿಕ ಗುತ್ತಿಗೆ ಪಡೆದು ಹಣ್ಣು ತಂದು ಇಲ್ಲಿನ ಕೂಲಿ ಕಾರ್ಮಿಕರ ಕುಟುಂಬಕ್ಕೆ ಕೆಲಸ ನೀಡುತ್ತಿದ್ದರೆ, ಮತ್ತೆ ಕೆಲವು ರೈತರು ತಮ್ಮ ಸ್ವಂತ ಜಮೀನುಗಳಲ್ಲಿನ ಬೆಳೆದ ಮರಗಳಿಂದ ಕೂಲಿಕಾರರಿಗೆ ಕೆಲಸ ನೀಡುತ್ತಿದ್ದಾರೆ.

**ಬೆಳಗಿನ ಜಾವ ಕೊಡತಿ ಸದ್ದು:** ಜನವರಿ ತಿಂಗಳಿನಿಂದ ಏಪ್ರಿಲ್ ತಿಂಗಳವರೆಗೆ ಗ್ರಾಮೀಣ ಪ್ರದೇಶದಲ್ಲಿ ಬೆಳಗಿನಜಾವ 3 ಗಂಟೆ ಹೊತ್ತಿಗೆ ಮಹಿಳೆಯರು ಹುಣಸೆ ಹಣ್ಣನ್ನು ಕಲ್ಲಿನ ಮೇಲಿಟ್ಟು ಕೊಡತಿಯಿಂದ ಕುಟ್ಟುತ್ತ ಬೀಜ ಮತ್ತು ಹಣ್ಣನ್ನು ಬೇರ್ಪಡಿಸುವ ಸದ್ದು ಸುಖ ನಿದ್ರೆಯಲ್ಲಿರುವವರನ್ನು ಎಚ್ಚರಿಸುತ್ತದೆ. ಶ್ರಮಿಕ ಮಹಿಳೆಯರ ಗುಂಪು ರಾತ್ರಿ 10 ಗಂಟೆಯವರೆಗೂ ಹಣ್ಣು-ಗೊಳ್ಳೆಯನ್ನು ಬೇರ್ಪಡಿಸಿ ನಂತರ ಬೆಳಗಿನ ಜಾವದಿಂದ ತಮ್ಮ ಕೆಲಸವನ್ನು ಪ್ರಾರಂಭಿಸುತ್ತಾ, ಸತತ ಮೂರು ತಿಂಗಳು ಬಿಡುವಿಲ್ಲದೆ ಕೆಲಸ ಮಾಡಿ ಒಬ್ಬ ಮಹಿಳೆ ಕನಿಷ್ಠ 25 ರಿಂದ 30 ಸಾವಿರದವರೆಗೆ ಹಣ ಸಂಪಾದಿಸುತ್ತಾರೆ. ಮೊಳಕಾಲ್ಮುರಿನ ಪ್ರಮುಖ ಬೆಳೆಯಾದ ಶೇಂಗಾ ಸುಗ್ಗಿಯು ಡಿಸೆಂಬರ್ ತಿಂಗಳ ಕೊನೆಗೆ ಅಂತ್ಯವಾಗುತ್ತದೆ ನಂತರ ಕೂಲಿ ಕಾರ್ಮಿಕರಿಗೆ ಮುಂದೇನು ಎಂದು ಯೋಚಿಸುವ ಹೊತ್ತಿಗೆ ಹುಣಸೆ ಮರದ ಗುತ್ತಿಗೆದಾರರಿಂದ ಕೆಲಸಕ್ಕೆ ಆಹ್ವಾನ ಬರುತ್ತದೆ. ಇದರಿಂದ ಕೂಲಿ ಕಾರ್ಮಿಕರು ಕೆಲಸಕ್ಕಾಗಿ ಅಲೆಯುವುದು ಅಥವಾ ವಲಸೆ ಹೋಗುವ ಪ್ರಮೇಯ ತಪ್ಪುತ್ತದೆ.



**ನಿರೀಕ್ಷೆಗೂ ಮೀರಿ ಬೆಂಬಲ ಬೆಲೆ:** ಕರೋನಾದ ನಂತರ ಹಣ್ಣಿನ ಬೆಲೆ ಭಾರೀ ಕುಸಿದಿತ್ತು. ಒಂದು ಕ್ವಿಂಟಲ್‌ಗೆ ಕೇವಲ 3 ಸಾವಿರ ರೂ. ಸಿಗುತ್ತಿತ್ತು ದಿನದಿಂದ ದಿನಕ್ಕೆ ಕೂಲಿ ಆಳುಗಳ ಕೂಲಿಯೂ ಏರಿತ್ತು. ಇದರಿಂದ ಸತತ ಮೂರು ವರ್ಷಗಳ ಕಾಲ ಗುತ್ತಿಗೆದಾರರು ನಷ್ಟ ಅನುಭವಿಸಿದ್ದರು. ಈ ವರ್ಷ ನಿರೀಕ್ಷೆಗೂ ಮೀರಿ ಬೆಂಬಲ ಬೆಲೆ ಸಿಕ್ಕಿದೆ. ಕರ್ಪುಳಿ (ಬಾಕ್ಸಿಗೆ ತುಂಬಿದ ಹಣ್ಣು) ಹಣ್ಣಿಗೆ ಪ್ರಸ್ತುತ ಮಾರುಕಟ್ಟೆಯಲ್ಲಿ 25 ರಿಂದ 30 ಸಾವಿರ, ಸಾದ ಹೂ ಹಣ್ಣಿಗೆ ಪ್ರತಿ ಕ್ವಿಂಟಲ್‌ಗೆ 8 ರಿಂದ 9 ಸಾವಿರ. ಹಾಗೂ ಸಾಧಾರಣ ಹೂ ಹಣ್ಣಿಗೆ ಕ್ವಿಂಟಲ್‌ಗೆ 7 ಸಾವಿರ ರೂ. ಮಾರುಕಟ್ಟೆಯಲ್ಲಿ ಬೆಲೆ ಇದ್ದು, ಗುತ್ತಿಗೆದಾರರು ಹಾಕಿದ ಬಂಡವಾಳಕ್ಕೆ ಮೋಸವಿಲ್ಲ ಎಂಬ ನಂಬಿಕೆಯಲ್ಲಿದ್ದಾರೆ.

**ವಾರ್ಷಿಕ 300 ಮರ ಗುತ್ತಿಗೆ:** ಮೊಳಕಾಲ್ಮೂರು ತಾಲೂಕಿನಲ್ಲಿ ಹೇರಳವಾಗಿ ಹುಣಸೆ ಮರಗಳು ಇಲ್ಲದೆ ಇರುವುದರಿಂದ ನಾವು ಕೂಡ್ಲಿಗಿ ತಾಲೂಕಿನ ಗ್ರಾಮೀಣ ಭಾಗದ ರೈತರನ್ನು ಆಶ್ರಯಿಸಿಕೊಂಡಿದ್ದೇವೆ. ವಾರ್ಷಿಕ ಅಥವಾ ತ್ರೈವಾರ್ಷಿಕ ಗುತ್ತಿಗೆ ಆಧಾರದ ಮೇಲೆ ಸುಮಾರು 300 ಮರಗಳನ್ನು ಪಡೆಯುತ್ತೇವೆ ಎಂದು ಗುತ್ತಿಗೆದಾರ ಸುಭಾನ್ ಸಾಬ್ ತಿಳಿಸಿದ್ದಾರೆ.

ಮರಗಳಿಂದ ಹಣ್ಣು ಉದುರಿಸಲು 18 ಜನ ಗಂಡಾಳು, ಆರಿಸಿ ಕುಪ್ಪೆ ಹಾಕಲು 8 ಜನ ಹೆಣ್ಣಾಳುಗಳಿಗೆ 500 ರೂ. ದಿನಗೂಲಿ ಕೊಡುತ್ತೇವೆ. ಜೊತೆಗೆ ಹಣ್ಣು ಕುಟ್ಟಿ ಬೀಜ ಬೇರ್ಪಡಿಸಲು 20 ಜನ ಮಹಿಳೆಯರಿಗೆ ಪ್ರತಿ ಕೆಜಿಗೆ 15 ರೂ. ದರ ನಿಗದಿಪಡಿಸಿ, ಒಬ್ಬ ಮಹಿಳೆ ಒಂದು ದಿನಕ್ಕೆ ಕನಿಷ್ಠ 35 ಕೆ.ಜಿ.ಯಷ್ಟು ಹಣ್ಣು ಕುಟ್ಟುತ್ತಾಳೆ.

**-ಸುಭಾನ್‌ಸಾಬ್**, ಹುಣಸೆ ಮರ ಗುತ್ತಿಗೆದಾರ, ಚಿನ್ನೋಬನಹಳ್ಳಿ.





## ಮ್ಯಾಮ್ಕೋಸ್‌ಗೆ 19 ನಿರ್ದೇಶಕರ ಆಯ್ಕೆ : ಮುಖಂಡರು, ಕಾರ್ಯಕರ್ತರಲ್ಲಿ ಮತ್ತಷ್ಟು ಹುಮ್ಮಸ್ಸು

**ಭದ್ರಾವತಿ :** ಜಿಲ್ಲೆಯಲ್ಲಿ ನಡೆದ ಮ್ಯಾಮ್ಕೋಸ್ ಚುನಾವಣೆಯಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಶ್ರಮವಹಿಸಿದ ಹಿನ್ನಲೆಯಲ್ಲಿ 19 ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಇದು ಸಂಘಟಿತವಾಗಿ ಕಾರ್ಯನಿರ್ವಹಿಸಿದ ಫಲ ಎಂದು ಬಿಜೆಪಿ ತಾಲೂಕು ಮಂಡಲ ಅಧ್ಯಕ್ಷ ಜಿ. ಧರ್ಮಪ್ರಸಾದ್ ಹೇಳಿದರು.

ಅವರು ಭಾನುವಾರ ಮಂಡಲದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮ್ಯಾಮ್ಕೋಸ್‌ಗೆ ನೂತನವಾಗಿ ಆಯ್ಕೆಯಾದ 19 ನಿರ್ದೇಶಕರಿಗೆ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಕ್ಷದ ಪರವಾಗಿ 19 ಅಭ್ಯರ್ಥಿಗಳನ್ನು ಬೆಂಬಲಿಸಿ ಅವರ ಗೆಲುವಿಗೆ ಶಕ್ತಿಮೀರಿ ಶ್ರಮಿಸಲಾಗಿದ್ದು, ಬೆಂಬಲಿಸಿದ ಎಲ್ಲಾ 19 ನಿರ್ದೇಶಕರು ಸಹ ಗೆಲುವು ಸಾಧಿಸಿರುವುದು ಸಂತೋಷದ ಸಂಗತಿಯಾಗಿದೆ. ಇದು ಪಕ್ಷದ ಮುಖಂಡರು, ಕಾರ್ಯಕರ್ತರಲ್ಲಿ ಮತ್ತಷ್ಟು ಹುಮ್ಮಸ್ಸು ಹೆಚ್ಚಿಸಿದೆ ಎಂದರು.

ಮ್ಯಾಮ್ಕೋಸ್ ಜಿಲ್ಲಾಧ್ಯಕ್ಷ ಮಹೇಶ್ ಉಲ್ಲುಳಿ ಮಾತನಾಡಿ, ಸಹಕಾರ ಭಾರತಿ ಶಿವಮೊಗ್ಗ ಜಿಲ್ಲೆಯಲ್ಲಿ ನಡೆದಂತಹ ಚುನಾವಣೆಯನ್ನು ಸಮರ್ಥವಾಗಿ ಎದುರಿಸಿದೆ. 19 ಅಭ್ಯರ್ಥಿಗಳ ಗೆಲುವಿಗೆ ಕಾರಣಕರ್ತರಾದ ಪಕ್ಷದ ಮುಖಂಡರು, ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಮುಖಂಡರು, ಕಾರ್ಯಕರ್ತರ ಶ್ರಮ ಹೆಚ್ಚಿನದ್ದಾಗಿದೆ ಎಂದರು.

ಪಕ್ಷದ ಜಿಲ್ಲಾ ಉಪಾಧ್ಯಕ್ಷ ಜಿ. ಅನಂದ್ ಕುಮಾರ್, ಹೊಳೆಹೊನ್ನೂರು ಮಂಡಲ ಅಧ್ಯಕ್ಷ ಮಲ್ಲೇಶಪ್ಪ, ಜಿಲ್ಲಾ ವಿಶೇಷ ಆಹ್ವಾನಿತ ಎಚ್. ತೀರ್ಥಯ್ಯ, ಸಹಕಾರ ಭಾರತಿ ಜಿಲ್ಲಾ ನಿರ್ದೇಶಕರಾದ ಕುಪೇಂದ್ರಪ್ಪ, ಕೀರ್ತಿರಾಜ್, ಮಹೇಶ್, ಭೀಮಣ್ಣ, ವಿಶ್ವ ಹಿಂದೂ ಪರಿಷದ್ ಜಿಲ್ಲಾ ಉಪಾಧ್ಯಕ್ಷ ಶಿವಕುಮಾರ್, ಸಂಘದ ಪ್ರಮುಖರಾದ ಡಾ. ದತ್ತಾತ್ರೆ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಚೆನ್ನೇಶ್ ಹಾಗೂ ಮೊಸರಳ್ಳಿ ಅಣ್ಣಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪರಿಸರಕ್ಕೆ ಮಾರಕವಾಗಿರುವ ಪ್ಲಾಸ್ಟಿಕ್ ನಿಷೇಧಿಸಿ

**ಜಗಳೂರು:** ಪಟ್ಟಣದಲ್ಲಿ ಹಲವು ವರ್ಷಗಳಿಂದ ಜನರ ಆರೋಗ್ಯದ ದೃಷ್ಟಿಯಿಂದ ಹಾಗೂ ಪರಿಸರಕ್ಕೆ ಮಾರಕವಾಗಿರುವ ನಿಷೇಧಿತ ಪ್ಲಾಸ್ಟಿಕ್ ಮಾರಾಟ ಜಗಳೂರು ಪಟ್ಟಣದಲ್ಲಿ ಎಗ್ಗಿಲ್ಲದೆ ನಡೆಯುತ್ತಿದೆ. ಇದನ್ನು ತಡೆಯವವರು ಯಾರು? ಮುಕ್ತ ಎಂದು ಪರಿಸರವಾದಿಗಳು ವಾದವಾಗಿದೆ.

ಪರಿಸರಕ್ಕೆ ಮಾರಕವಾಗಿರುವ ನಿಷೇಧಿತ ಪ್ಲಾಸ್ಟಿಕ್‌ನ್ನು ಮಾರುಕಟ್ಟೆಯಲ್ಲಿ ತರಕಾರಿ,ದಿನಸಿ ಅಂಗಡಿಗಳು,ಮಾಂಸದ ಅಂಗಡಿಗಳಲ್ಲಿ,ವರ್ತಕರು ವ್ಯಾಪಕವಾಗಿ ಪ್ಲಾಸ್ಟಿಕ್‌ನ್ನು ಬಳಕೆ ಮಾಡುತ್ತಿದ್ದಾರೆ.ಜನತೆಯೂ ಸಹ ಈ ಪ್ಲಾಸ್ಟಿಕ್‌ಗೆ ಬಳಕೆಗೆ ಹೋದಿಕೊಂಡಿದ್ದಾರೆ.ಪಟ್ಟಣದಲ್ಲಿ ಒಟ್ಟು ಹೋಲ್‌ಸೇಲ್ ಕ್ಯಾರಿಬ್ಯಾಂಗ್ ಮಾರಾಟ ಮಾಡುವ 4 ಅಂಗಡಿಗಳು ಇವೆ.ಈ ಅಂಗಡಿಗಳು ಸಾವಿರರು ರೂಪಾಯಿ ವ್ಯವಹಾರವನ್ನು ಮಾಡುತ್ತಿವೆ.

ಪ್ಲಾಸ್ಟಿಕ್ ನಿಷೇಧದ ಬಗ್ಗೆ ಅಧಿಕಾರಿಗಳ ಮೀಟಿಗ್,ಜಾಗೃತಿಗೆ ಮಾತ್ರ ಸೀಮಿತ: ಈ ನಿಷೇಧಿತ ಪ್ಲಾಸ್ಟಿಕ್ ಮಾರಾಟದ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳು ಸೇರಿದಂತೆ ಮುಖ್ಯಾಧಿಕಾರಿಗಳಿಗೆ ಹಾಗೂ ಪರಿಸರ ಅಭಿಯಂತರರಿಗೆ ಇದರ ಸಮಗ್ರವಾದ ಮಾಹಿತಿ ಇರುತ್ತದೆ.ಹಲವಾರು ಭಾರಿ ಜಿಲ್ಲಾ ಕೇಂದ್ರದಲ್ಲಿ ಮತ್ತು ತಾಲ್ಲೂಕ್ ಕೇಂದ್ರಗಳಲ್ಲಿ ಮೀಟಿಗ್ ಮಾಡಲಾಗುತ್ತದೆ. ಜಾಗೃತಿಯನ್ನು ಮಾಡಲಾಗುತ್ತದೆ.ಆದರೆ ಈ ಅಧಿಕಾರಿಗಳು ಪ್ಲಾಸ್ಟಿಕ್ ಕ್ಯಾರಿಬ್ಯಾಂಗ್ ಮಾರಾಟಗಾರರ ಮೇಲೆಯಾವುದೇ ಕಠಿಣವಾದ ಕ್ರಮವನ್ನು ಜರುಗಿಸುವಲ್ಲಿ ವಿಫಲವಾದಂತೆ ಜನರ ಕಣ್ಣಿಗೆ ಕಾಣುತ್ತಿದ್ದರೆ.



ಇದನ್ನು ತಳಮಟ್ಟದಿಂದ ತಡೆಯುವವರು ಯಾರು?: ಪಟ್ಟಣದಲ್ಲಿ ಪ್ಲಾಸ್ಟಿಕ್ ಮಾರಾಟಗಾರರು ವಿವಿಧ ರಾಜಕೀಯ ಪಕ್ಷಗಳೊಂದಿಗೆ ಗುರುತ್ತಿಸಿಕೊಂಡಿರುವ ವ್ಯಕ್ತಿಗಳು ಯಾವುದೇ ಅಧಿಕಾರಿಗಳು ನಿಷೇಧಿತ ಪ್ಲಾಸ್ಟಿಕ್ ಅಂಗಡಿಗಳ ಮೇಲೆ ದಾಳಿಯನ್ನು ಮಾಡಿದ ಕ್ಷಣಾರ್ಧದಲ್ಲಿಯೇ ವಿವಿಧ ರಾಜಕೀಯ ವ್ಯಕ್ತಿಗಳಿಂದ ಫೋನ್ ಕೆರೆಗಳು ಬರುತ್ತವೆ.ರಾಜಕೀಯ ವ್ಯಕ್ತಿಗಳಿಂದ ಪೋನ್ ಕರೆ ಬಂದ ತಕ್ಷಣ ವಶಪಡಿಸಿಕೊಂಡಿರುವ ನಿಷೇಧಿತ ಪ್ಲಾಸ್ಟಿಕ್ ಕ್ಯಾರಿಬ್ಯಾಂಗ್‌ಗಳನ್ನು ಅಂಗಡಿಗಳಿಗೆ ವಾಪಸ್ ನೀಡಿ ವಿಷದವನ್ನು ವ್ಯಕ್ತಪಡಿಸಿದ ಆನೇಕ ಉದಾಹರಣೆಗಳು ಇವೆ.ಎಂದು ಹೆಸರು ಹೇಳಲಿಚ್ಚಿಸದ ಸರ್ಕಾರಿ ಅಧಿಕಾರಿಯೋರ್ವರು ಪತ್ರಿಕೆಗೆ ತಮ್ಮ ಅಳಲುನ್ನು ತೋಡಿಕೊಡಿದ್ದರೆ.

ಎಲ್ಲವನ್ನು ಗೊತ್ತಿರುವ ಅಧಿಕಾರಿಗಳು ಸುಮ್ಮನಿರುವುದಾದರೂ ಯಾಕೆ?: ರಾಜಕೀರ ಪಕ್ಷಗಳ ವ್ಯಕ್ತಿಗಳ ಹೆಸರು ಹೇಳಿಕೊಂಡೆ ಕೆಲ ಸರಕಾರಿ ಅಧಿಕಾರಿಗಳು ಪರೋಕ್ಷವಾಗಿ ನಿಷೇಧಿತ ಪ್ಲಾಸ್ಟಿಕ್ ವಸ್ತುಗಳ ಮಾರಾಟಕ್ಕೆ ಸಹಕಾರವನ್ನು ನೀಡುತ್ತಿದ್ದಾರೆ.ಪ್ಲಾಸ್ಟಿಕ್ ಮಾರಾಟವನ್ನು ಮಾಡುವ ಅಂಗಡಿಯಾವರು ಸಹ ಅಧಿಕಾರಿಗಳಿಂದ ಯಾವುದೇ ಬಿಟ್ಟಿ ಸಹಕಾರವನ್ನು ಪಡೆಯುತ್ತಿಲ್ಲ.ಅಧಿಕಾರಿಗಳು ನೀಡುವ ಸಹಕಾರಕ್ಕೆ ಮಾಸಿಕ ಗೌರವಧನವನ್ನು ನಿಯಮಿತವಾಗಿ ಅಧಿಕಾರಿಗಳ ವರ್ಗಕ್ಕೆ ತಲುಪುತ್ತಿದೆ.ಇದರೀಮದ ಪಟ್ಟಣದಲ್ಲಿ ಪ್ಲಾಸ್ಟಿಕ್ ವಸ್ತುಗಳ ಮಾರಾಟಗಾರರು ಮತ್ತು ಅಧಿಕಾರಿಗಳು ತಮ್ಮ ಪಾಡಿಗೆ ತಾವು ಹಲವಾರು ವರ್ಷಗಳಿಂದ ಸುಮ್ಮನಿದ್ದರೆ ಎನ್ನುವ ಗಂಭಿರ ಆರೋಪಗಳು ಕೇಳಿ ಬರುತ್ತಿವೆ. ಹಲವಾರು ವರ್ಷಗಳಿಂದ ರಸೀದಿಗಳನ್ನು ನೀಡದೆ ವಂಚಿಸಿರುವ ಪ.ಪಂ: ಹಳೆ ಬಸ್ ಸ್ಟ್ಯಾಂಡ್ ನಿಂದ ಹೊಸ ಸ್ಟ್ಯಾಂಡ್‌ನ ಅಕ್ಕಪಕ್ಕದ ಅಂಗಡಿಗಳಲ್ಲಿ.ಹಾಗೂ ಭುವನೇಶ್ವರಿ ಸರ್ಕಲ್ ಇರುವ ಅಂಗಡಿಗಳಲ್ಲಿ.ಬೇಕರಿ,ಹೊಲಸೇಲ್ ಕಿರಾಣಿ ಅಂಗಡಿಗಳು,ಬಟ್ಟೆ ಅಂಗಡಿಗಳು,ಹಣ್ಣು ಅಂಗಡಿಗಳು,ಬೀದಿ ಬೀದಿ ವ್ಯಾಪಾರಸ್ಥರ ಮೇಲೆ ಪಟ್ಟಣ ಪಂಚಾಯತಿ ಸಿಬ್ಬಂದಿಗಳು 01\04\23 ರಿಂದ 31\03\24 ರಿಂದ 01\04\24 ರಿಂದ 28\02\25 ರ ವರೆಗೆ ದಾಳಿಯನ್ನು ಮಾಡಿ 75 ಕೆಜಿ ಏಕ ಬಳಕೆ ಪ್ಲಾಸ್ಟಿಕ್ ಕ್ಯಾರಿಬ್ಯಾಂಗ್,ನಿಷೇಧಿತ ಪ್ಲಾಸ್ಟಿಕ್ ಮಾರಾಟಗಾರರಿಗೆ 24481 ಸಾವಿರ ದಂಡವನ್ನು ವಿಧಿಸಲಾಗಿದೆ.ಈ ಪ್ಲಾಸ್ಟಿಕ್‌ನ್ನು ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಾಶವಡಿಸಿದ್ದಾರೆ.

2019-20,2021-22 ರಲ್ಲಿ ಯಾವುದೇ ಮಾಹಿತಿ ಇರುವುದಿಲ್ಲ.ಈ ಸಮಯದಲ್ಲಿ ಪಟ್ಟಣ ಪಂಚಾಯತಿಯವರು ಯಾವುದೇ ರಶೀದಿಗಳನ್ನು ನೀಡಿರುವುದಿಲ್ಲ ಎನ್ನುವ ಆರೋಪಗಳು ಸಾರ್ವಜನಿಕರಿಂದ ಕೇಳಿ ಬರುತ್ತಿವೆ. ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ ಲೋಕ್ಯನಾಯ್ಕ,ಆರೋಗ್ಯ ನಿರೀಕ್ಷಕ ಪ್ರಶಾಂತ್ ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ಕೆ.ಡಿ.ಪಿ ಸಭೆಯ ಸ್ಥಳ ಬದಲಾವಣೆ

**ದಾವಣಗೆರೆ :** ದಾವಣಗೆರೆ ತಾಲ್ಲೂಕಿನ ಪ್ರಸಕ್ತ ಸಾಲಿನ 4ನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯನ್ನು ಮಾಯಕೊಂಡ ಶಾಸಕರಾದ ಕೆ.ಎಸ್ ಬಸವಂತಪ್ಪ ಅವರ ಅಧ್ಯಕ್ಷತೆಯಲ್ಲಿ ಏಪ್ರಿಲ್ 7 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಅರುಣ ಚಿತ್ರಮಂದಿರ ಎದುರು, ಪಶು ಆಸ್ಪತ್ರೆಯ ಅಮೃತ ಮಹೋತ್ಸವ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ಹೆಚ್.ಎಂ. ಪ್ರತಾಪ್‌ಗೆ ಪಿಹೆಚ್‌ಡಿ ಪದವಿ

**ದಾವಣಗೆರೆ:** ಜಗಳೂರು ತಾಲ್ಲೂಕಿನ ಹಿರೇ ಮಲ್ಲನಹೊಳೆ ಗ್ರಾಮದ ಹೆಚ್.ಎಂ.ಪ್ರತಾಪ್ ಅವರಿಗೆ ದಾವಣಗೆರೆ ವಿಶ್ವವಿದ್ಯಾಲಯವು ಜೀವರಸಾಯನಶಾಸ್ತ್ರ ವಿಷಯದಲ್ಲಿ ಪಿಹೆಚ್‌ಡಿ ಪದವಿ ನೀಡಿ ಗೌರವಿಸಿದೆ.
ದಾವಣಗೆರೆ ವಿಶ್ವವಿದ್ಯಾಲಯ ಜೀವ ರಸಾಯನಶಾಸ್ತ್ರ ಅಧ್ಯಯನ ವಿಭಾಗದ ಪ್ರೊ. ವಡ್ಲಪೂಡಿ ಕುಮಾರ್ ಅವರ ಮಾರ್ಗದರ್ಶನದಲ್ಲಿ "ಮೆಮೆಸಿಲಾನ್ಮಲಬಾರಿಕಮ್ (ಸಿ.ಬಿ.ಕ್ಲಾರ್ಕ್) ಕಾಗ್ನ ಜೈವಿಕ ಗುಣಲಕ್ಷಣಗಳ ಮೌಲ್ಯಮಾಪನ" ಎಂಬ ವಿಷಯದ ಕುರಿತು ಮಂಡಿಸಿದ ಸಂಶೋಧನಾ ಪ್ರಬಂಧಕ್ಕೆ ಪಿಹೆಚ್‌ಡಿ ನೀಡಲಾಗಿದೆ.

## ಡೀಸೆಲ್ ದರ ಏರಿಕೆ: ರಾಜ್ಯ ಸರ್ಕಾರದ ನಡೆ ಖಂಡಿಸಿ ಏಪ್ರಿಲ್ 14 ರಂದು ಲಾರಿ ಮಾಲೀಕರ ಮುಷ್ಕರ

**ಬೆಂಗಳೂರು:** ಅಗತ್ಯ ವಸ್ತುಗಳ ದರ ಏರಿಕೆ ಬೆನ್ನಲ್ಲೇ ರಾಜ್ಯ ಸರ್ಕಾರ ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಹೆಚ್ಚಿಸಿದ್ದು ಇದು ಲಾರಿ ಮಾಲೀಕರ ಆಕ್ರೋಶಕ್ಕೆ ಕಾರಣವಾಗಿದೆ. ಡೀಸೆಲ್ ದರ ಏರಿಕೆ ಖಂಡಿಸಿ ಏಪ್ರಿಲ್ 14ರ ಮಧ್ಯರಾತ್ರಿಯಿಂದ ಲಾರಿ ಮಾಲೀಕರ ಸಂಘ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲು ನಿರ್ಧರಿಸಿದೆ. ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಎರಡು ರೂಪಾಯಿ ಹೆಚ್ಚಳ ಮಾಡಿ ರಾಜ್ಯ ಸರ್ಕಾರ ಈಗಾಗಲೇ ಆದೇಶ ಹೊರಡಿಸಿದೆ. ಇದು ಲಾರಿ ಮಾಲೀಕರ ಆಕ್ರೋಶಕ್ಕೆ ಕಾರಣವಾಗಿದೆ. ಹೀಗಾಗಿ ಮುಷ್ಕರಕ್ಕೆ ಕರೆ ನೀಡಿದ್ದು 5 ಲಕ್ಷ ಲಾರಿಗಳು ಸಂಚಾರ ನಿಲ್ಲಿಸಲಿವೆ.

# ಹಿಂದೂಗಳ ಸುರಕ್ಷತೆಗಾಗಿ ಉಗಮಗೊಂಡ ಪಕ್ಷ ಬಿಜೆಪಿ : ದೇವರಾಜ್‌ಶೆಟ್ಟಿ

**ಚಿಕ್ಕಮಗಳೂರು :** ಭವ್ಯಭಾರತ ವಿಭಜನೆಗೊಂಡ ಬಳಿಕ ನೆರೆದೇಶದಲ್ಲಿ ಸಿಲುಕಿಕೊಂಡ ಸಮಗ್ರ ಹಿಂದೂ ಅಣ್ಣ-ತಮ್ಮಂದಿರು ಹಾಗೂ ಮಾತೆಯರ ಸುರಕ್ಷತೆಗಾಗಿ ಮೊಟ್ಟಮೊದಲು ಉಗಮಗೊಂಡ ಪಕ್ಷ ಭಾರತೀಯ ಜನತಾ ಪಾರ್ಟಿ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಎಂ.ಆರ್.ದೇವರಾಜ್‌ಶೆಟ್ಟಿ ಹೇಳಿದರು.

ನಗರದ ಪಾಂಚಜನ್ಯ ಕಚೇರಿಯಲ್ಲಿ ನಗರ ಬಿಜೆಪಿ ಮಂಡಲ ವತಿಯಿಂದ ಏರ್ಪಡಿಸಿದ್ದ ಭಾರತೀಯ ಜನತಾ ಪಾರ್ಟಿ 45ನೇ ಸಂಸ್ಥಾಪನ ದಿನದ ಪ್ರಯುಕ್ತ ದ್ವಜಾರೋಹಣ ನೆರವೇರಿಸಿ ಹಾಗೂ ಪಕ್ಷಗಾಗಿ ದು ಡಿದ ಮಹಾನಾಯಕರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಭಾನುವಾರ ಅವರು ಮಾತನಾಡಿದರು.

ರಾಷ್ಟ್ರಹಿತಗಾಗಿ ಶ್ಯಾಮ್ ಪ್ರಕಾಶ್ ಮುಖರ್ಜಿ ನೆಹರು ಮಂತ್ರಿ ಮಂಡಲದ ಸ್ಥಾನವನ್ನು ತ್ಯಜಿಸಿ ಭಾರ ತಾಂಭೆಯ ಸೇವೆಗೆ ಮುಡಿಪಿಟ್ಟರು. ಸ್ವಾತಂತ್ರ್ಯ ಪೂರ್ವದಲ್ಲಿ ಪಶ್ಚಿಮ ಬಂಗಾಳ ರಾಜ್ಯವನ್ನು ಪಾಕಿಸ್ತಾನಕ್ಕೆ ಬಿಡಬೇಕೆಂಬ ನಿರ್ಧಾರ ಕೈಗೊಂಡಾಗ, ಸಾರಸಗಟಾಗಿ ವಿರೋಧಿಸಿ ರಾಷ್ಟ್ರದ ನೆಲವನ್ನು ಭಾರತೀಯರಿಗೆ ಉಳಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.





ಹಿಂದೂರಾಷ್ಟ್ರ ಕಲ್ಪನೆಯೊಂದಿಗೆ ಜನಸಂಘ ರಾಷ್ಟ್ರದಲ್ಲಿ ಹೆಮ್ಮರವಾಗಿ ಬೆಳೆಯಿತು. ಅಂದಿನ ಕಾಂಗ್ರೆಸ್ ಸರ್ಕಾರ ಈ ಬೆಳವಣಿಗೆ ಸಹಿಸದೇ ಅನೇಕ ತೊಂದರೆ ನೀಡಿದ್ದನ್ನು ಮನಗಂಡು ಜನಸಂಘ ವಿಸರ್ಜಿಸಿ ಮು ಂಚೂಣಿ ನಾಯಕರಾದ ವಾಜಪೇಯಿ, ಅಡ್ವಾಣಿ ಸಾರಥ್ಯದಲ್ಲಿ 1980ರಲ್ಲಿ ಬಿಜೆಪಿ ಪಕ್ಷ ಉಗಮಗೊಂಡು ರಾಷ್ಟ್ರ ರಾಜಕಾರಣಕ್ಕೆ ಸಂಸದರನ್ನು ಕೊಡುಗೆ ನೀಡಿತು ಎಂದು ಹೇಳಿದರು.

ರೈತಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಸಿ.ಕಲ್ಮರುಡಪ್ಪ ಮಾತನಾಡಿ ರಾಷ್ಟ್ರದ ಅಸ್ಮಿತೆ ಉ ಳಿವಿಗಾಗಿ ವೈಚಾರಿಕತೆಯಡಿ ಭಾರತೀಯ ಜನತಾ ಪಾರ್ಟಿಯನ್ನು ಸ್ಥಾಪಿಸಿ ಕಾರ್ಯಕರ್ತರನ್ನು ಸಂಘಟಿಸಿ ತು. ವ್ಯಕ್ತಿಗಿಂತ ರಾಷ್ಟ್ರ ಮುಖ್ಯ, ದೇಶದ ಹಿತವೇ ಸ್ವಹಿತ ಎಂಬ ತತ್ವವನ್ನು ಸಾರಿದ ಮೊದಲ ಪಕ್ಷ ಭಾಜಪ ಎಂದು ತಿಳಿಸಿದರು.

ಭಾಜಪವು ಅಧಿಕಾರಕ್ಕೆ ಜೋತುಬೀಳದೇ ಸ್ವಾತಂತ್ರ್ಯ ಹೋರಾಟಗಾರ ಮೊರಾರ್ಜಿ ದೇಸಾಯಿ ಅವರನ್ನು ದೇಶದ 4ನೇ ಪ್ರಧಾನಿ ಸೂಚಿಸಿತು. ಬಳಿಕ ಪ್ರಧಾನಮಂತ್ರಿ ಹುದ್ದೆಗೂ ವಾಜಪೇಯಿ ಹಾಗೂ ಅಡ್ವಾಣಿ ಯು ಆಸೆಪಟ್ಟಿಲ್ಲ. ಈ ಮಹಾನೀಯರ ಔಹಾರ್ದತೆ, ಆದರ್ಶ ಇಂದಿನ ರಾಜಕೀಯ ಮುಖಂಡರುಗಳು ಅ ಳವಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಬಿಜೆಪಿ ನಗರಾಧ್ಯಕ್ಷ ಕೆಂಪನಹಳ್ಳಿ ಪುಷ್ಪರಾಜ್ ಬಿಜೆಪಿ ಆರಂಭದಲ್ಲಿ ಅನೇಕ ಸವಾಲು, ಸಂಕಷ್ಟವನ್ನು ಧೈರ್ಯವನ್ನು ಎದುರಿಸಿದ ಕಾರಣ ಇಂದು ರಾಷ್ಟ್ರದಲ್ಲೇ ಹೆಚ್ಚು ಲೋಕಸಭಾ ಸದಸ್ಯರು, ಶಾಸಕರು, ವಿಧಾನ ಪರಿಷತ್ ಸದಸ್ಯರನ್ನು ಒಳಗೊಂಡಿದೆ. ಅಲ್ಲದೇ ಹೆಚ್ಚಿನ ಸದಸ್ಯತ್ವ ನೋಂದಾಯಿಸಿ ಪ್ರಪಂಚದ ದೊಡ್ಡಪಕ್ಷವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ವಕ್ತಾರ ಹಿರೇಮಗಳೂರು ಪುಟ್ಟಸ್ವಾಮಿ, ಹಿಂದುಳಿದ ವರ್ಗ ಮೋ ರ್ಚಾದ ರಾಜ್ಯ ಕಾರ್ಯದರ್ಶಿ ಬಿ.ರಾಜಪ್ಪ, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಕುರುವಂಗಿ ವೆಂಕಟೇಶ್, ನಗರ ಸಭಾ ಅಧ್ಯಕ್ಷೆ ಸುಜಾತ ಶಿವಕುಮಾರ್, ಮಾಜಿ ಅಧ್ಯಕ್ಷ ಕವಿತಾ ಶೇಖರ್, ಉಪಾಧ್ಯಕ್ಷೆ ಅನುಮಧುಕರ್, ನಗರಸಭೆ ಸದಸ್ಯರಾದ ಮಧುಕುಮಾರ್, ರೂಪ, ಯುವಮೋರ್ಚಾ ಅಧ್ಯಕ್ಷ ಸಂತೋಷ್ ಕೋಟ್ಯಾನ್, ಮು ಖಂಡರುಗಳಾದ ಜಸಂತಾ ಅನಿಲ್‌ಕುಮಾರ್, ವೀಣಾ, ಹೆಚ್.ಕೆ.ಕೇಶವಮೂರ್ತಿ, ಸಚ್ಚಿನ್‌ಗೌಡ, ದಿನೇಶ್, ಪ್ರದೀಪ್, ಎಸ್‌ಡಿ ಎಂ ಮಂಜು, ನಾರಾಯಣ್, ಬ್ಯಾಟರಿ ಮಂಜುನಾಥ್ ಮತ್ತಿತರರಿದ್ದರು.




# ಬೆಲೆ ಏರಿಕೆ ಖಂಡಿಸಿ ಆಮ್ ಆದ್ಮಿ ಪ್ರತಿಭಟನೆ

**ಹರಿಹರ:** ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ಆಮ್ ಅದ್ಮಿ ಪಕ್ಷದಿಂದ ಶನಿವಾರ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಪ್ರತಿಭಟನೆ ನಡೆಸಿ, ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯ್ತು.

ನಂತರ ಮಾತನಾಡಿದ ಪಕ್ಷದ ತಾಲೂಕು ಅಧ್ಯಕ್ಷ ಜಿ.ಹೆಚ್. ಬಸವರಾಜ ಕೇಂದ್ರ ಸರ್ಕಾರದ ಅವೈಜ್ಞಾನಿಕ ಜಿಎಸ್‌ಟಿ ನೀತಿ, ಪೆಟ್ರೋಲ್ ಮತ್ತು ಡೀಸೆಲ್‌ಗಳ ಮೇಲೆ ಮಿತಿ ಮೀರಿದ ಸೆಸ್ ವಿಧಿಸಿರುವುದು, ಹೆದ್ದಾರಿ ಟೋಲ್ ದರ, ರೈಲು ಪ್ರಯಾಣ ದರ ಸೇರಿದಂತೆ ಎಲ್ಲದಕ್ಕೂ ಬೆಲೆ ಹೆಚ್ಚಿಸಿ, ಬಡವರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದರು.

ಮನ ಬಂದಂತೆ ಗ್ಯಾರಂಟಿಗಳನ್ನು ಘೋಷಿಸಿದ ರಾಜ್ಯ ಸರ್ಕಾರ ಈ ಯೋಜನೆಗಳಿಗೆ ಹಣ ಹೊಂದಿಸಲು ಹಾಲು, ವಿದ್ಯುತ್, ಬಸ್, ಮೆಟ್ರೋ ದರ ಹೆಚ್ಚಿಸಿದೆ. ಮುದ್ರಾಂಕ ಶುಲ್ಕ ದುಪ್ಪಟ್ಟು ಮಾಡಿ ಜನರ ಸುಲಿಗೆ ಮಾಡುತ್ತಿದೆ. ಆರ್ಥಿಕ ತಜ್ಞರೆಂದು ತಮ್ಮನ್ನು ತಾವೇ ಬಿಂಬಿಸಿಕೊಳ್ಳುವ ಮುಖ್ಯಮಂತ್ರಿ ಸಿದ್ದರಾಮಯ್ಯ ಆರ್ಥಿಕ ಸ್ಥಿತಿಗತಿ ನೋಡಿಕೊಂಡು ಗ್ಯಾರಂಟಿ ಘೋಷಣೆ ಮಾಡಬೇಕಿತ್ತು ಎಂದರು.

ಜಿಲ್ಲಾ ಕಾರ್ಯದರ್ಶಿ ಎಸ್.ಕೆ.ಆದಿಲ್ ಖಾನ್ ಮಾತನಾಡಿ, ಒಂದು ಕೈಯಿಂದ ಕಿತ್ತುಕೊಂಡು ಮತ್ತೊಂದು ಕೈಗೆ ಕೊಡುವ ಗ್ಯಾರಂಟಿ ಯೋಜನೆಗಳು ಬೇಕಾಗಿಲ್ಲ. ರಾಜ್ಯ ಸರ್ಕಾರ ಕೂಡಲೆ ಗ್ಯಾರಂಟಿ ರದ್ದುಪಡಿಸಿ, ಜನ ಸಾಮಾನ್ಯರನ್ನು ಬೆಲೆ ಏರಿಕೆಯಿಂದ ಮುಕ್ತಿಗೊಳಿಸಬೇಕು ಎಂದರು.



ಪ್ರಧಾನ ಕಾರ್ಯದರ್ಶಿ ಮಹಮ್ಮದ್‌ಯೂಸೂಫ್, ನಗರ ಘಟದ ಅಧ್ಯಕ್ಷ ಬಿ. ಮಲ್ಲೇಶ್, ಮಹಿಳಾ ವಿಭಾಗದ ಅಧ್ಯಕ್ಷೆ ರೇಖಾ ಬಿ.ಆಡೂರು, ಮುಖಂಡರಾದ ಎಸ್.ಪಿ.ರೋಹಿತ್, ಭಾಷಾ, ಕೆ.ರವಿಂದ್ರ, ಮುಸ್ತಾಫಾ, ವೀರಭದ್ರಪ್ಪ ನಾಗೇನಹಳ್ಳಿ. ಗಂಗಮ್ಮ ಇತರರಿದ್ದರು.

# ಕಲೆ, ಸಾಹಿತ್ಯ ಕ್ಷೇತ್ರದಲ್ಲಿ ಜಿಲ್ಲೆಗೆ ವಿಶೇಷ ಸ್ಥಾನಮಾನವಿದೆ : ಕಣ್ಣನ್

**ಚಿಕ್ಕಮಗಳೂರು :** ಕನ್ನಡನಾಡು ಸಾಹಿತ್ಯ, ಸಂಗೀತ, ಕಲೆಗಳಿಗೆ ಜೀವತುಂಬಿದ ಬೀಡು. ಕವಿಸಂತರು, ಕೀರ್ತನೆಕಾರರ ಕೊಡುಗೆಯಿಂದ ಕನ್ನಡ ಭಾಷೆ ದೇಶಾದ್ಯಂತ ಮನ್ನಣೆ ಪಡೆದುಕೊಂಡಿದೆ ಎಂದು ಕನ್ನಡ ಪೂಜಾರಿ ಹಿರೇಮಗಳೂರು ಕಣ್ಣನ್ ಹೇಳಿದರು.

ನಗರದ ಹಿರೇಮಗಳೂರು ಸಮೀಪ ಶ್ರೀ ಕೋದಂಡರಾಮ ಸಮುದಾಯ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕು ಮಹಿಳಾ ಘಟಕದ ಸೇವಾದೀಕ್ಷೆ ಸಮಾರಂಭ ಮತ್ತು ದತ್ತಿ ಉಪನ್ಯಾಸ ಕಾರ್ಯ ಕ್ರಮವನ್ನು ಭಾನುವಾರ ಸಂಜೆ ಉದ್ಘಾಟಿಸಿ ಅವರು ಮಾತನಾಡಿದರು.

ಸಾಹಿತ್ಯಕ್ಷೇತ್ರದಲ್ಲಿ ಚಿಕ್ಕಮಗಳೂರು ವಿಶೇಷ ಸ್ಥಾನಮಾನವಿದೆ. ರಾಷ್ಟ್ರಕವಿ ಕುವೆಂಪು ಜನನವಾದ ಊ ರಿನಲ್ಲಿ ಸಾಹಿತ್ಯಕ್ರಾಂತಿ ಯಥೇಚ್ಚವಾಗಿದೆ. ಅಲ್ಲದೇ ಪೂರ್ಣಚಂದ್ರ ತೇಜಸ್ವಿ ಕಥೆ, ಕಾದಂಬರಿಗಳು ಓದುಗರರಿ ಗೆ ವಿಶೇಷ ಅನುಭವ ನೀಡುವುದರಲ್ಲಿ ಸಂಶಯವಿಲ್ಲ ಎಂದು ಹೇಳಿದರು.

ಇತ್ತೀಚಿನ ಆಂಗ್ಲಭಾಷೆ ವ್ಯಾಮೋಹಕ್ಕೆ ಯುವಪೀಳಿಗೆ ದಾಸರಾಗುತ್ತಿದ್ದಾರೆ. ಎಡವಿ ಬಿದ್ದಾಗ ಬರುವಂಥ ಕನ್ನಡಪದ, ದೈನಂದಿನ ಕಾರ್ಯಗಳಲ್ಲಿ ತೋರುತ್ತಿಲ್ಲ. ಹೀಗಾಗಿ ಪಾಲಕರು ಮನೆಯಿಂದಲೇ ಭಾಷಾ ಸಂ ಸ್ಕೃತಿ, ಪರಂಪರೆ ಹಾಗೂ ಇತಿಹಾಸ ತಿಳಿಸುವ ಕಾರ್ಯವಾಗಬೇಕು ಎಂದರು.



ಜಿಲ್ಲೆಯ ಕಸಾಪದಲ್ಲಿ ಮಹಿಳಾ ಘಟಕವು ಮುಂಚೂಣಿಯಲ್ಲಿರುವುದು ಹೆಮ್ಮೆಯ ಸಂಗತಿ. ಅಡುಗೆ ಅ ಥವಾ ಕೆಲಸಕ್ಕೆ ಸೀಮಿತರಾಗದೇ ನಾಡಿನ ಸೌಗಂಧವನ್ನು ಪರಿಚಯಿಸುವ ಕಾರ್ಯ ಶ್ಲಾಘನೀಯ. ಹೀಗಾಗಿ ಕನ್ನಡ ಕೆಲಸದಲ್ಲಿ ಹೆಚ್ಚು ಮಹಿಳಾ ಮಣಿಯರು ತೊಡಗಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಹಿರಿಯ ವೈದ್ಯ ಡಾ॥ ಜೆ.ಪಿ.ಕೃಷ್ಣೇಗೌಡ ಮಾತನಾಡಿ ಕನ್ನಡವೆಂದರೆ ಕೇವಲ ಭಾಷೆಯಲ್ಲ, ಉಸಿರೆಂದು ಭಾವಿಸಬೇಕು. ಪ್ರತಿನಿತ್ಯದ ಕೆಲಸ-ಕಾರ್ಯಗಳಲ್ಲಿ ಕಡ್ಡಾಯವಾಗಿ ಕನ್ನಡ ಬಳಕೆ ಮಾಡಬೇಕು. ಈ ನಡೆಯಿಂ ದಲೇ ಕನ್ನಡ ಸೊಗಡನ್ನು ಎಲ್ಲೆಡೆ ಪಸರಿಸಲು ಸಾಧ್ಯ ಎಂದ ಅವರು ನೂತನ ಮಹಿಳಾ ಅಧ್ಯಕ್ಷರು ಹೆಚ್ಚಿನ ಒತ್ತನ್ನು ನಾಡಿನ ಸೇವೆಗೆ ಮುಡಿಪಿಡಬೇಕು ಎಂದು ಹೇಳಿದರು.

## ಪರಿಷತ್ ನಾಮನಿರ್ದೇಶನಕ್ಕೆ ಕಾಂಗ್ರೆಸ್ ಹೈ ಕಮಾಂಡ್ ಅನುಮೋದನೆ: ಏಪ್ರಿಲ್ 10ರ ನಂತರ ಅಧಿಕೃತ ಘೋಷಣೆ

**ಬೆಂಗಳೂರು:** ಖಾಲಿ ಇರುವ ವಿಧಾನ ಪರಿಷತ್ನ ನಾಲ್ಕು ಸ್ಥಾನಗಳಿಗೆ ನಾಮನಿರ್ದೇಶನ ಮಾಡಲು ಕಾಂಗ್ರೆಸ್ ಹೈಕಮಾಂಡ್ ಅನುಮೋದನೆ ನೀಡಿದೆ. ಏಪ್ರಿಲ್ 8 ಮತ್ತು 9 ರಂದು ಅಹಮದಾಬಾದ್ನಲ್ಲಿ ನಡೆಯಲಿರುವ ಎಐಸಿಸಿ ಅಧಿವೇಶನದ ನಂತರ ಏಪ್ರಿಲ್ 10 ರಂದು ಅಧಿಕೃತ ಘೋಷಣೆ ಹೊರಬೀಳುವ ನಿರೀಕ್ಷೆಯಿದೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ಮತ್ತು ಎಐಸಿಸಿ ಪದಾಧಿಕಾರಿಗಳು ಇಬ್ಬರೂ ಇದರಲ್ಲಿ ಭಾಗವಹಿಸಲಿದ್ದಾರೆ.ಎಂಎಲ್ ಸಿ ರೇಸ್ ನಲ್ಲಿರುವ ಕಾರ್ಯದರ್ಶಿಗಳು ಸೇರಿದಂತೆ ಎಐಸಿಸಿ ಪದಾಧಿಕಾರಿ ಗಳಾಗಿರುವ ನಾಯಕರಿಗೆ ಯಾವುದೇ ಮುಜುಗರವಾಗದಂತೆ ನೋಡಿಕೊಳ್ಳಲು ಈ ಘೋಷಣೆ ಸಮಯ ನಿಗದಿಪಡಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.ಒಕ್ಕಲಿಗ ಸಮುದಾಯದ ಹಿರಿಯ ನಾಯಕ, ಎಸ್ಸಿ ಮತ್ತು ಒಬಿಸಿ ಸಮುದಾಯಗಳಿಂದ ತಲಾ ಒಬ್ಬರು ಮತ್ತು ಇನ್ನೊಬ್ಬ ಅಲ್ಪಸಂಖ್ಯಾತ ನಾಯಕ ಸೇರಿದಂತೆ ನಾಲ್ವರ ಹೆಸರುಗಳನ್ನು ಪಕ್ಷದ ಹೈಕಮಾಂಡ್ ಅನುಮೋದಿಸಿದೆ .

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**